MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com | Yuva Marga | yuva_marga_

# ಯುವ ಮಾರ್ಗ

YUVA MARGA NEWS PAPER — VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

YUVA MARGA KANNADA DAILY NEWS PAPER

ಸಂಪುಟ: 05 | ಸಂಚಿಕೆ: 65 | ಶನಿವಾರ : 27-12-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 65 | SATURDAY : 27-12-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಪ್ರತಿ ದಿನ ಚಿರತೆ ದಾಳಿ: ಹಸುಗಳ ಸಾವು! ಗ್ರಾಮಸ್ಥರ ಆಕ್ರೋಶ





ಯುವಮಾರ್ಗ ಸುದ್ದಿ

**ದೇವದುರ್ಗ,ಡಿ.26–** ಅರಣ್ಯ ಇಲಾಖೆಯ ನಿರ್ಲಕ್ಷ್ಯದಿಂದ ಚಾಲಾಕಿ ಚಿರತೆ ಪದೇ ಪದೇ ದಾಳಿ ಮಾಡುತ್ತಿದ್ದು. ಸಾಕು ಪ್ರಾಣಿಗಳು ಬಲಿಯಾಗುತ್ತಿರುವ ಘಟನೆಗಳು ಜನರಲ್ಲಿ ಆತಂಕ ಮೂಡಿಸಿದೆ. ಇದೀಗ ಮತ್ತೊಮ್ಮೆ ಚಿರತೆ ದಾಳಿ ಮಾಡಿದ ಪರಿಣಾಮ ಹಸು ಸಾವನ್ನಪ್ಪಿರುವ ಘಟನೆ ದೇವದುರ್ಗ ತಾಲ್ಲೂಕಿನ ಜಿ ಇರಬಾಗೇರ ಗ್ರಾಮದಲ್ಲಿ ನಡೆದಿದ್ದು ಕಂಡು ಬಂದಿದ್ದು

ಚಿರತೆ ದಾಳಿಯಿಂದ ಹಸು ಸಾವನ್ನಪ್ಪಿದ ಹಿನ್ನೆಲೆಯಲ್ಲಿ ಗ್ರಾಮಸ್ಥರಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ. ಕಳೆದ ಹಲವು ದಿನಗಳಿಂದ ಜಿ ಇರಬಗೇರಾ ಕೋತ್ತದೊಡ್ಡಿ ಮಲ್ಲಿನಾಯಕನ ದೊಡ್ಡಿ ಗ್ರಾಮಗಳ ವ್ಯಾಪ್ತಿಯಲ್ಲಿ ಚಿರತೆ ದಾಳಿಗೆ ಸಾಕು ಪ್ರಾಣಿಗಳು ಬಲಿಯಾಗುತ್ತಿದ್ದು, ಅರಣ್ಯ ಇಲಾಖೆಯ ಅಧಿಕಾರಿಗಳ ನಿರ್ಲಕ್ಷ್ಯದ ವಿರುದ್ಧ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಚಿರತೆಯನ್ನು ಪತ್ತೆಹಚ್ಚಿ ಸೆರೆಹಿಡಿಯಲು ಜಿ ಇರಬಗೇರಾ ಕೋತ್ತದೊಡ್ಡಿ ಮಲ್ಲಿನಾಯಕನ ದೊಡ್ಡಿ ಹಾಗೂ ಸುತ್ತಮುತ್ತಲಿನ ಗುಡ್ಡಗಾಡು ಪ್ರದೇಶದಲ್ಲಿ ತಕ್ಷಣ ಕಾರ್ಯಾಚರಣೆ ನಡೆಸಬೇಕೆಂದು ಗ್ರಾಮಸ್ಥರು ಅರಣ್ಯ ಇಲಾಖೆಯ ಅಧಿಕಾರಿಗಳ ವಿರುದ್ಧ ಜನರು ಆಗ್ರಹಿಸಿದ್ದಾರೆ.

## ಪ್ರಯಾಣಿಕರಿಗೆ ಅನುಕೂಲ ಕಲ್ಪಿಸಲು 16 ನಗರ ಹೊಸ ಬಸ್‌ಗಳಿಗೆ ಚಾಲನೆ: ಶಾಸಕರಾದ ಡಾ.ಶಿವರಾಜ ಎಸ್ ಪಾಟೀಲ್

ಯುವಮಾರ್ಗ ಸುದ್ದಿ

**ರಾಯಚೂರು,ಡಿ.26:** ರಾಯಚೂರು ನಗರದ ವಿವಿಧೆಡೆ ನಿತ್ಯ ತೆರಳುವ ಪ್ರಯಾಣಿಕರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ 16 ನಗರ ಹೊಸ ಬಸ್‌ಗಳಿಗೆ ಚಾಲನೆ ನೀಡಲಾಗಿದ್ದು, ಇದರಿಂದ ಸಾರ್ವಜನಿಕರು, ಮಹಿಳೆಯರು ಹಾಗೂ ಮಕ್ಕಳಿಗೆ ಅನುಕೂಲವಾಗಲಿದೆ ಎಂದು ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ. ಶಿವರಾಜ ಎಸ್. ಪಾಟೀಲ್ ಅವರು ಹೇಳಿದರು.

ಡಿಸೆಂಬರ್ 26ರ ಶುಕ್ರವಾರ ದಂದು ನಗರದ ಕೆ.ಕೆ.ಆರ್.ಟಿ.ಸಿ ಮೂರನೇ ಘಟಕದಲ್ಲಿ ಹಮ್ಮಿಕೊಳ್ಳಲಾಗಿದ್ದ 16 ನಗರ ಸಾರಿಗೆ ಬಸ್ಸುಗಳಿಗೆ ಪೂಜಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮವು ನಗರ ಸಾರಿಗೆ ವ್ಯವಸ್ಥೆಯನ್ನು ಇನ್ನಷ್ಟು ಉತ್ತಮಗೊಳಿಸಲು ಮೇ ಟಾಟಾ ಮೋಟಾರ್ಸ್ ತಯಾರಿಕೆಯ ಹೊಸ ನಗರ ಸಾರಿಗೆ ಬಸ್ಸಗಳನ್ನು ಸೇರ್ಪಡೆಗೊಳಿಸುತ್ತಿರುವುದು ಸಂತಷದ ಸಂಗತಿಯಾಗಿದೆ. ಈ ಬಸ್‌ಗಳಿಗೆ 187 ಎಚ್.ಪಿ. ಸಾಮರ್ಥ್ಯದ ಬಿಎಸ್–6 ಎಂಜಿನ್‌ಗಳನ್ನು ಅಳವಡಿಸಲಾಗಿದ್ದು, ಈ ಬಸ್‌ಗಳನ್ನು ಆಟೋಮೋಟಿವ್ ಇಂಡಸ್ಟ್ರಿ ಸ್ಟ್ಯಾಂಡರ್ಡ್–ಎಐಎಸ್–052 ಬಸ್ ಕೋಡ್ ನಂತೆ ನಿರ್ಮಿಸಲಾಗಿದೆ. ಈ ಬಸ್ ಗಳು 40 ಪ್ರಯಾಣಿಕ ಆಸನಗಳನ್ನು ಹೊಂದಿದ್ದು, ಎಲ್‌ಇಡಿ ಟ್ಯೂಬ್ ಲೈಟ್ ಅಳವಡಿಸುವುದರೊಂದಿಗೆ ಒಳಾಂಗಣವನ್ನು ಉತ್ತಮವಾಗಿ ವಿನ್ಯಾಗೊಳಿಸಲಾಗಿದೆ ಎಂದರು.



ಈ ಬಸ್‌ಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರ ಸುರಕ್ಷತೆಗಾಗಿ ಒಟ್ಟು ನಾಲ್ಕು ಸಿ.ಸಿ. ಕ್ಯಾಮೆರಾಗಳನ್ನು ಆಳವಡಿಸಲಾಗಿದೆ. ಜೊತೆಗೆ ಆಧುನಿಕ ತಂತ್ರಜ್ಞಾನ ಹೊಂದಿರುವ ಸ್ವಯಂ ಚಾಲಿತ ಅಗ್ನಿ ನಂದಕ ಉಪಕರಣಗಳನ್ನು, ರೀವರ್ಸ್ ಪಾಕಿಂಗ್ ಅಲರಾಮ್ ವ್ಯವಸ್ಥೆ ಹಾಗೂ ಲೋಕೆಶನ್ ಟ್ರಾಕಿಂಗ್, ಪ್ಯಾನಿಕ್ ಬಟನಗಳನ್ನು ಅಳವಡಿಸಲಾಗಿದೆ. ಬಸ್‌ಗಳನ್ನು ಸರಿಯಾಗಿ ಉಪಯೋಗಿಸಬೇಕೆಂದು ನಿಗಮದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ವೇಳೆ, ವೇಳೆ ನೂತನ ಬಸ್‌ಗಳಲ್ಲಿ ಶಾಸಕರು ಸಂಚರಿಸಿ ಬಸ್‌ಗಳ ಗುಣಮಟ್ಟ ಪರೀಕ್ಷಿಸಿದರು.

ಇದೇ ಸಂದರ್ಭದಲ್ಲಿ ಮುಖಂಡರಾದ ರವಿ ಜಲ್ದಾರ್, ರಾಯಚೂರು ವಿಭಾಗದ ಸಂಚಾರಿ ಅಧಿಕಾರಿ ಚಂದ್ರಶೇಖರ ಕೆ.ಎಲ್., ವಿಭಾಗದ ತಾಂತ್ರಿಕ ಅಭಿಯಂತರರಾದ ನಾಗರಾಜ್ ವರಾದ್, ಆಡಳಿತ ಅಧಿಕಾರಿ ದೇವರಾಜ್, ಡಿಪೋ ವ್ಯವಸ್ಥಾಪಕ ನಾನೇಗೌಡ, ಭದ್ರತಾ ಮತ್ತು ಜಾಗೃತಿ ಅಧಿಕಾರಿ ಶ್ರೀನಿವಾಸ ಸೇರಿದಂತೆ ವಿವಿಧ ವಿಭಾಗದ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಮುಖಂಡರು ಇದ್ದರು.

ಮಾನ್ವಿ ದೈಹಿಕ ಶಿಕ್ಷಕರಿಗೆ ಪ್ರಥಮ ಚಿಕಿತ್ಸೆ ಕುರಿತು ಕಾರ್ಯಾಗಾರ:

## ಒತ್ತಡದ ಜೀವನ ಶೈಲಿಯಲ್ಲಿ ಪ್ರಥಮ ಚಿಕಿತ್ಸೆ ಮಾಹಿತಿ ಅತ್ಯಗತ್ಯ: ಚಂದ್ರಶೇಖರ ದೊಡ್ಡಮನಿ



ಯುವಮಾರ್ಗ ಸುದ್ದಿ

**ಮಾನ್ವಿ,ಡಿ.26–** ಒತ್ತಡದ ಜೀವನ ಶೈಲಿಯಿಂದಾಗಿ ಬಹುತೇಕರಲ್ಲಿ ಒಂದಲ್ಲಾ ಒಂದು ರೀತಿಯ ಕಾಯಿಲೆಗಳು ಕಾಣಿಸಿಕೊಳ್ಳುತ್ತಿದ್ದು ಪ್ರಥಮ ಚಿಕಿತ್ಸಾ ವಿಧಾನಗಳನ್ನು ಅನುಸರಿಸುವುದರಿಂದ ಹೆಚ್ಚಿನ ಅಪಾಯಗಳನ್ನು ತಡೆಗಟ್ಟಲು ಸಾಧ್ಯವಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ದೊಡ್ಡಮನಿ ಹೇಳಿದರು.

ಪಟ್ಟಣದ ಬ್ರಾಹ್ಮಣವಾಡಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ ಬೆಂಗಳೂರು ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ರಾಯಚೂರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಮಾನವಿ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ದೈಹಿಕ ಶಿಕ್ಷಕರಿಗೆ ಪ್ರಥಮ ಚಿಕಿತ್ಸೆ ಕುರಿತು ಒಂದು ದಿನದ ಕಾರ್ಯಾಗಾರವನ್ನು ಸಸಿಗೆ ನೀರು ಎರೆದು ಉದ್ಘಾಟಿಸಿ ಮಾತನಾಡಿದ ಅವರು, ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ವಿಶೇಷವಾಗಿ ಮಾನ್ವಿ ತಾಲೂಕಿಗೆ ಹೆಚ್ಚಿನ ಆದ್ಯತೆಯನ್ನು ನೀಡುವ ಮೂಲಕ ಶಾಲೆಗಳಲ್ಲಿ ಉಪಯುಕ್ತವಾದ ಪ್ರಮುಖ ಮೂರು ಕಾರ್ಯಕ್ರಮಗಳನ್ನು ನೀಡಿದ್ದಾರೆ. ಪ್ರಥಮವಾಗಿ ಶಾಲೆಗಳಲ್ಲಿ ವಿಜ್ಞಾನ ವಸ್ತುಗಳ ಪ್ರದರ್ಶನ ಮತ್ತು ಎಸ್‌ಎಸ್‌ಎಲ್ಸಿ ಫಲಿತಾಂಶ ಸುಧಾರಣೆಗಾಗಿ ವಿಜ್ಞಾನ ವಿಷಯ ಶಿಕ್ಷಕರಿಗೆ ತರಬೇತಿ ಕಾರ್ಯಾಗಾರ ಹಾಗೂ ದೈಹಿಕ ಶಿಕ್ಷಕರಿಗೆ ಪ್ರಥಮ ಚಿಕಿತ್ಸೆ ಕುರಿತು ಕಾರ್ಯಾಗಾರ ದಂತಹ ಮಹತ್ವದ ಕಾರ್ಯಕ್ರಮಗಳನ್ನು ನೀಡುವ ಮೂಲಕ ಸರ್ಕಾರಿ ಶಾಲೆಗಳ ಬಗ್ಗೆ ಹೆಚ್ಚಿನ ಆಸಕ್ತಿಯನ್ನು ತೋರಿಸಿದ್ದಾರೆ ಎಂದು ಶ್ಲಾಘಿಸಿದರು. ಪ್ರಸ್ತುತ ದಿನಗಳಲ್ಲಿ ಪ್ರಥಮ ಚಿಕಿತ್ಸಾ ವಿಧಾನಗಳ ಬಗ್ಗೆ ಪ್ರತಿಯೊಬ್ಬರು ತಿಳಿದುಕೊಳ್ಳುವದು ಅಗತ್ಯವಿದೆ.ವಿಶೇಷವಾಗಿ ದೈಹಿಕ ಶಿಕ್ಷಕರಿಗೆ ಇದರ ಮಾಹಿತಿ ತುಂಬಾ ಉಪಯುಕ್ತವಾಗಿದ್ದು, ಕ್ರೀಡೆಗಳ ಸಮಯದಲ್ಲಿ ಶಾಲಾ ಮಕ್ಕಳಲ್ಲಿ ಉಂಟಾಗುವ ಗಾಯಗಳು, ತಲೆ ಸುತ್ತು ವಿವಿಧ ಸಂದರ್ಭದಲ್ಲಿ ಮಕ್ಕಳಿಗೆ ಪ್ರಥಮ ಚಿಕಿತ್ಸೆಗಳ ವಿಧಾನ ಅಗತ್ಯವಾಗಿದೆ. ಇದರ ಜ್ಞಾನ ಮಕ್ಕಳಿಗೂ ಅಗತ್ಯವಿದೆ. ಪ್ರಸ್ತುತ ಒತ್ತಡದ ಜೀವನದಲ್ಲಿ ಕಾಯಿಲೆಗಳು ಸಹಜವಾಗಿದ್ದೂ ಪ್ರಥಮ ಚಿಕಿತ್ಸಾ ವಿಧಾನಗಳನ್ನು ಅನುಸರಿಸುವುದರಿಂದ ಹೆಚ್ಚಿನ **(2ನೇ ಪುಟಕ್ಕೆ....)**

## ಭಾರತೀಯ ಜನತಾ ಪಾರ್ಟಿ ಮಾನ್ವಿ ಮಂಡಲ ವತಿಯಿಂದ ಅಟಲ್ ಸ್ಮೃತಿ ವರ್ಷ ಆಚರಣೆ




ಯುವಮಾರ್ಗ ಸುದ್ದಿ

**ಮಾನ್ವಿ,ಡಿ.26–** ಪಟ್ಟಣದ ಭಾರತೀಯ ಜನತಾ ಪಾರ್ಟಿ ಮಾನ್ವಿ ಮಂಡಲ ಕಾರ್ಯಾಲಯದಲ್ಲಿ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಯವರ ಜನ್ಮದಿನ ಅಂಗವಾಗಿ ಅಟಲ್ ಸ್ಮೃತಿ ವರ್ಷ ಆಚರಿಸಲಾಯಿತು. ಬಿಜೆಪಿ. ಮಾನ್ವಿ ಮಂಡಲ ಅಧ್ಯಕ್ಷರಾದ ವೀರಭದ್ರಗೌಡ ಭೋಗವಾತಿ ಮಾತನಾಡಿ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಯವರು ಭಾರತ ದೇಶ ಕಂಡ ಒಬ್ಬ ಶ್ರೇಷ್ಠ ಪ್ರಧಾನಿ ಹಾಗೂ ಕವಿ,ವಾಗ್ಮಿ, ರಾಜಕಾರಣಿಯಾಗಿದ್ದರು ದೇಶದ ಅಭಿವಿಧ್ಧಿಗೆ ಅತ್ಯಂತ ದೊಡ್ಡ ಕೋಡುಗೆಯನ್ನು ನೀಡಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಮುಖಂಡರಾದ ಜೆ.ಸುಧಾಕರ್, ಗುರುಸಿದ್ದಪ್ಪ ಕಣ್ಣೂರು,ಶರಣೆಗೌಡ ನಕ್ಕುಂದಿ,ಜಗದೀಶ ಓತ್ತೂರು, ಗೋಪಾಲ ಇಭ್ರಾಮಪುರ್, ಹನಮೇಶ ನಾಯಕ ಜಿನೂರ್, ಕುಮಾರ ಮೇದಾ,ಸುರೇಶ ನಕ್ಕುಂದಿ, ಸೇರಿದಂತೆ ಇನ್ನಿತರರು ಇದ್ದರು

## ಸುಶಿಕ್ಷತ ವರ್ಗವೇ ತಂದೆ ತಾಯಿಯರನ್ನು ವೃದ್ಧಾಶ್ರಮಕ್ಕೆ ದೂಡುತ್ತಿದೆ. ಅಕ್ಬರ್ ಅಲಿ ಉಡುಪಿ




ಯುವಮಾರ್ಗ ಸುದ್ದಿ

**ಕೊಡೇಕಲ್ಲ,ಡಿ.26–** ಶಿಕ್ಷಣ ಹಾಗೂ ಹಣದ ವ್ಯಾಮೋಹದೊಂದಿಗೆ ಬದುಕುತ್ತಿರುವ ಸಮಾಜಘಾತುಕರು , ಶಿಕ್ಷಣದಲ್ಲಿ ಪಾಂಡಿತ್ಯವನ್ನು ಗಳಿಸಿದ ಕೆಲವರು ಇಂದು ತನ್ನ ತಂದೆ ತಾಯಿಯರನ್ನು ವೃದ್ಧಾಶ್ರಮಕ್ಕೆ ದೂಡುತ್ತಿದ್ದಾರೆ. ಬಹುತೇಕ ದೊಡ್ಡ ದೊಡ್ಡ ನಗರಗಳಲ್ಲಿ ಜನರು ತಂದೆ ತಾಯಿಯರನ್ನು ನೋಡದೆ ನಾಯಿಗಳನ್ನು ಸಾಕುವ ಪ್ರಸಂಗ ಕಾಣಸಿಗುತ್ತಿದೆ ಎಂದು ನಾಡಿನ ಖ್ಯಾತ ವಾಗ್ಮಿಗಳು ಚಿಂತಕರು ಆದಂತಹ ಶ್ರೀ ಅಕ್ಬರ್ ಅಲಿ ಉಡುಪಿ ರವರು ಹೇಳಿದರು. ಪರಮ ಪೂಜ್ಯಶ್ರೀ ಬಸವರಾಜಯ್ಯ ಅಪ್ಪನವರ 71ನೇ ಪುಣ್ಯಾರಾಧನೆ ಅಂಗವಾಗಿ ನಡೆದ ಧರ್ಮ ಸಭೆ ಹಾಗೂ ಗೌರವ ಸನ್ಮಾನ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಉಪನ್ಯಾಸವನ್ನು ನೀಡಿದರು. ಮಠ ಮಂದಿರ ಮಸೀದಿಗಳಲ್ಲಿ ಚರ್ಚ್ ಗಳಲ್ಲಿ ಧರ್ಮದ ಬೋಧನೆಯನ್ನು ಸರಿಯಾದ ರೀತಿಯಲ್ಲಿ ಮಾಡುವ ಅವಶ್ಯಕತೆ ಇದೆ. ಧರ್ಮಗಳು ಬಂದದ್ದು ಮನಸ್ಸನ್ನು ಜೋಡಿಸಲಿಕ್ಕಾಗಿ ವಿನಃ ಮನಸ್ಸನ್ನು ಹೊಡೆಯುವ ಕೆಲಸ ಧರ್ಮಗಳು ಎಂದಿಗೂ ಮಾಡುವುದಿಲ್ಲ. ಇಂದು ಧರ್ಮದ ಹೆಸರಿನಲ್ಲಿ ಜಾತಿ ಹೆಸರಿನಲ್ಲಿ ಪರಸ್ಪರರಲ್ಲಿ ಹಗೆತನ ದ್ವೇಷ ಅರಾಜಕತೆ ಕೀಳು ಮೇಲು ಎಂಬ ಮನಸ್ಥಿತಿ ಕಾಣಸಿಗುತ್ತಿದೆ ಇಂತಹ ಮನೋಭಾವ ನಮ್ಮ ಸಮೀಪವು ಬರುದ ಹಾಗೆ ನೋಡಿಕೊಳ್ಳುವ ಜವಾಬ್ದಾರಿ ನಮ್ಮ ನಿಮ್ಮೆಲ್ಲರ ಮೇಲಿದೆ ಎಂದು ನುಡಿದರು.

ಸಮಾಜ ಸುಧಾರಣೆಯಾಗಬೇಕಾದರೆ ನಮ್ಮ ಕುಟುಂಬ ಸುಧಾರಿಸಬೇಕು, ನಮ್ಮ ಕುಟುಂಬ ಸುಧಾರಿಸಬೇಕಾದರೆ ನಮ್ಮ ಮನೆಯವರ ಸಂಸ್ಕಾರ ಸುಧಾರಣೆಯಾಗಬೇಕು.ಮುಂದುವರೆದು ಮಾತನಾಡಿದ ಅವರು. ಮನೆಯಲ್ಲಿ ಪ್ರೀತಿ ಮಮತೆಯಿಂದ ಎಲ್ಲರೂ ಕಾಣಬೇಕು. ಒಬ್ಬ ಪತಿ ತನ್ನ ಪತ್ನಿಗೆ ರಾಜನಾಗಬೇಕು ಒಬ್ಬ ಪತ್ನಿ ತನ್ನ ಪತಿಗೆ ರಾಣಿ ಆಗಬೇಕು. ಯಾವತ್ತಿಗೂ ಪತಿಗೆ ಕೂಲಿ ಕಾರ್ಮಿಕ ಎಂದು ತಿಳಿದುಕೊಂಡರೆ ಕೂಲಿ ಕಾರ್ಮಿಕನ ಹೆಂಡತಿಯು ಕೂಡ ಕೂಲಿ ಕಾರ್ಮಿಗಳಾಗುತ್ತಾಳೆ. ಮನೆ ಸುಧಾರಿಸಿತು ಎಂದಾಗ ಕುಟುಂಬ ಸುಧಾರಿಸತ್ತದೆ ಇದೇ ಕುಟುಂಬದಿಂದ ಸಮಾಜ ಸುಧಾರಣೆ ಆಗುತ್ತದೆ. ತಮ್ಮನ್ನು

## ವಿಕಲಚೇತನರಿಗೆ ತ್ರಿಚಕ್ರ ವಾಹನ ವಿತರಸಿದ ಶಾಸಕ ಅಪ್ಪಾಜಿ ನಾಡಗೌಡ

ಯುವಮಾರ್ಗ ಸುದ್ದಿ



**ತಾಳಿಕೋಟಿ,ಡಿ.26–** ತಾಲೂಕು ಪಂಚಾಯತ್ ವತಿಯಿಂದ ವಿಕಲಚೇತನರಿಗೆ 2024 ನೇ ಸಾಲಿನ ಅನುದಾನದ ಮೂರು ತ್ರಿಚಕ್ರ ವಾಹನಗಳನ್ನು, ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ, ಶಾಸಕ ಅಪ್ಪಾಜಿ ನಾಡಗೌಡರು ಫಲಾನುಭವಿಗಳಿಗೆ ಮಂಗಳವಾರ ವಿತರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು ಇವತ್ತು ತಾಲೂಕ ಪಂಚಾಯತ್ ವತಿಯಿಂದ 2024ನೇ ಸಾಲಿನ ಅನುದಾನದಲ್ಲಿ ವಿಕಲಚೇತನ ಫಲಾನುಭವಿಗಳಿಗೆ ಮಂಜೂರಾದ ಮೂರು ತ್ರಿಚಕ್ರ ವಾಹನಗಳ ಪೈಕಿ ವುಳಿದ ವಾಹನಗಳನ್ನು ವಿತರಿಸಿದ್ದೇನೆ ಇದರ ಸದ್ಬಳಕೆಯನ್ನು ಅವರು ಮಾಡಿಕೊಳ್ಳಬೇಕೆಂದು ತಿಳಿಸುತ್ತೇನೆ ಎಂದರು.ಈ ಸಮಯದಲ್ಲಿ ಜಿಲ್ಲಾ ಪಂಚಾಯತ್ ಲೆಕ್ಕಾಧಿಕಾರಿ ರಾಮಣ್ಣ ಅಥಣಿ, ತಾಪಂ ಇಓ ಅನುಸೂಯಾ ಚಲವಾದಿ, ಮುಖಂಡರಾದ ಸಿದ್ದನಗೌಡ ಪಾಟೀಲ ನಾವದಗಿ, ಪ್ರಭುಗೌಡ ಮದರಕಲ್ಲ, ಸಂಗಮೇಶ ದೇಸಾಯಿ, ರೋಷನ್ ಡೋಣಿ, ಸಂಗನಗೌಡ ಅಸ್ಕಿ, ಆರೀಫ ಕೆಂಭಾವಿ,ತಾಪಂನ ಬಸನಗೌಡ ಚೌಧರಿ, ಮಹಾಂತಗೌಡ ದೊರೇಗೋಳ ಹಾಗೂ ಸಿಬ್ಬಂದಿಗಳು ಇದ್ದರು.

ಯುವ ಮಾರ್ಗ

www.yuvamarga.com Yuva Marga yuva_marga_

# ಮೊದಲನೇಯ ಪುಟದಿಂದ

ಮಾನ್ವಿ ದೈಹಿಕ ಶಿಕ್ಷಕರಿಗೆ ಪ್ರಥಮ ಚಿಕಿತ್ಸೆ ಕುರಿತು ಕಾರ್ಯಾಗಾರ:

## ಒತ್ತಡದ ಜೀವನ ಶೈಲಿಯಲ್ಲಿ ಪ್ರಥಮ ಚಿಕಿತ್ಸೆ ಮಾಹಿತಿ ಅತ್ಯಗತ್ಯ: ಚಂದ್ರಶೇಖರ ದೊಡ್ಡಮನಿ

ಅಪಾಯಗಳನ್ನು ತಡೆಗಟ್ಟಲು ಸಾಧ್ಯವಿದೆ ಎಂದರು. ನಂತರ ಆರೋಗ್ಯ ಅಧಿಕಾರಿಗಳಾದ ಡಾ.ಶ್ರೀಧರ, ಡಾ.ಅಂಬಿಕಾ ಅವರು ಆಹಾರ ವಿಧಾನಗಳ ಮಹತ್ವ ಮತ್ತು ಅಗತ್ಯತೆ ಹಾಗೂ ಆಕಸ್ಮಿಕವಾಗಿ ಜರುಗುವ ಬೆಂಕಿಯಿಂದ ಸುಟ್ಟಗಾಯ, ತಲೆ ಸುತ್ತು, ಮೂರ್ಛೆ ಹೋಗುವಿಕೆ, ಕ್ರೀಡಾ ಸಮಯದಲ್ಲಿನ ಗಾಯಗಳು ಇತ್ಯಾದಿಗಳಿಗೆ ಅನುಸರಿಸಬೇಕಾದ ಪ್ರಥಮ ಚಿಕಿತ್ಸಾ ವಿಧಾನಗಳು ಬಗ್ಗೆ ಕಾರ್ಯಾಗಾರದಲ್ಲಿ ಸವಿವರವಾಗಿ ತಿಳಿಸಿಕೊಡಲಾಯಿತು.

ನಂತರ ಕಾರ್ಯಾಗಾರದಲ್ಲಿ ವೈದ್ಯ ಅಧಿಕಾರಿಗಳ ಡಾ.ಅಂಬಿಕಾ ಹಾಗೂ ಆರ್ಬಿಎಸ್ಕೆ ವೈದ್ಯ ಅಧಿಕಾರಿ ಡಾ.ಶ್ರೀಧರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ತಾಲೂಕ ದೈಹಿಕ ಶಿಕ್ಷಕ ಸಂಘದ ಅಧ್ಯಕ್ಷರಾದ ದೈ.ಶಿಕ್ಷಕರಾದ ಮಾರುತಿ, ನೂಡಲ್ ಅಧಿಕಾರಿ ಸಿದ್ಧಲಿಂಗೇಶ್ವರ, ಸಂಪನ್ಮೂಲ ವ್ಯಕ್ತಿಗಳಾದ ಶ್ರೀಕಾಂತ್ ಬಾಗೇವಾಡಿ, ಮೌನೇಶ ಸೇರಿದಂತೆ ವಿವಿಧ ಶಾಲೆಗಳ ಶಿಕ್ಷಕರು, ದೈಹಿಕ ಶಿಕ್ಷಕರು ಭಾಗವಹಿಸಿದ್ದರು.

## ಸುಶಿಕ್ಷಿತ ವರ್ಗವೇ ತಂದೆ ತಾಯಿಯರನ್ನು ವೃದ್ಧಾಶ್ರಮಕ್ಕೆ ದೂಡುತ್ತಿದೆ. ಅಕ್ಬರ್ ಅಲಿ ಉಡುಪಿ

ತಾವು ಸಜ್ಜನರು ಎಂದು ತಿಳಿದುಕೊಳ್ಳುವವರು ಕೆಡುಕುಗಳನ್ನು ನೋಡಿಯೂ ನೋಡದ ಹಾಗೆ ಇದ್ದರೆ ತಮ್ಮ ಕೈಲಾದಷ್ಟು ಪಾಪ ಕಾರ್ಯಗಳನ್ನು ತಡೆಯದೆ ಇದ್ದರೆ ನಿಜವಾದ ಸಮಾಜಘಾತಕರಾಗುತ್ತಾರೆ. 15ನೇ ಶತಮಾನದಲ್ಲಿ ಕೊಡೆಕಲ್ ಬಸವಣ್ಣನವರು ಜಗತ್ತಿಗೆ ಸರಿಯಾದ ಮಾರ್ಗವನ್ನು ನೀಡಲು ಇವೆಲ್ಲ ಕೆಡುಕುಗಳ ವಿರುದ್ಧ ಅಸಮಾನತೆಯ ವಿರುದ್ಧ ಒಂದು ಸತ್ಯದ ಮಾರ್ಗವನ್ನು ತೋರಿಸಿ ಹೋಗಿದ್ದಾರೆ. ಅವರು ಕೇವಲ ವಚನಗಳಿಂದ ಹೇಳಿದ್ದಲ್ಲ ಬದಲಾಗಿ ನಡೆದು ತೋರಿಸಿದ್ದಾರೆ. ಎಂದು ಹೇಳಿದರು. ಕಾರ್ಯಕ್ರಮದಲ್ಲಿ ದೇಶಕ್ಕಾಗಿ ಪ್ರಾಣವನ್ನು ವ್ಯಯಿಸಿದ ವೀರಯೋಧ ಹನುಮಂತಪ್ಪ ಕೊಪ್ಪದ್ ರವರ ಧರ್ಮಪತ್ನಿ ಹಾಗೂ ರಾಯಚೂರಿನಲ್ಲಿ ಸುಮಾರು ಹತ್ತು ಸಾವಿರಗಳಿಗಿಂತ ಹೆಚ್ಚು ಗಿಡಗಳನ್ನು ನೆಟ್ಟಿರುವಂತಹ ಪರಿಸರ ಪ್ರೇಮಿ ಶ್ರೀ ವೀರಣ್ಣ ಕೊಸ್ಗಿ ರವರಿಗೆ ವಿಶೇಷ ಸನ್ಮಾನವನ್ನು ಮಾಡಲಾಯಿತು.

ಮಹಲಿನಮಠದ ಬಸವ ಪೀಠಾಧಿಪತಿಗಳಾದಂತಹ ಪರಮಪೂಜ್ಯ ಶ್ರೀ ವೃಷಭೇಂದ್ರ ಅಪ್ಪನವರು ದಿವ್ಯ ಸಾನಿಧ್ಯವನ್ನು ವಹಿಸಿಕೊಂಡಿದ್ದರು. ವಿರಕ್ತಮಠದ ಪರಮಪೂಜ್ಯ ಶ್ರೀ ನೀಲಕಂಠ ಸ್ವಾಮೀಜಿಗಳು ಹಾಗೂ ಆದಿಶಕ್ತಿ ಪೀಠ ಎಣ್ಣಿವಡಿಗೇರಿಯ ಪೀಠಾಧಿಪತಿಗಳಾಗಿರುವ ಶ್ರೀ ಶಿವಯ್ಯ ಸ್ವಾಮಿಗಳು ಸಾನಿಧ್ಯವನ್ನು ವಹಿಸಿಕೊಂಡಿದ್ದರು. ರಾಜ ಮನೆತನದ ರಾಣಿ ಶ್ರೀಮತಿ ರಂಗಮ್ಮ ಜಹಾಗಿರದಾರರು ಹಾಗೂ ವೆಂಕಟಪ್ಪನಾಯಕ ಜಹಾಗಿರದಾರರು ಅಧ್ಯಕ್ಷೀಯ ಸ್ಥಾನವನ್ನು ಅಲಂಕರಿಸಿದ್ದರು ಮಾಜಿ ಸಚಿವರು ಮತ್ತು ಬಿಜೆಪಿ ರಾಜ್ಯ ಉಪಾಧ್ಯಕ್ಷರಾಗಿರುವಂತಹ ಶ್ರೀಯುತ ನರಸಿಂಹ ನಾಯಕ (ರಾಜು ಗೌಡ) ಅಧ್ಯಕ್ಷೀಯ ನುಡಿಗಳನ್ನಾಡಿದರು. ಗಣ್ಯರಾದ ಬಸವರಾಜ ಬದ್ರಗೋಳ ಪ್ರಾಸ್ತಾವಿಕವಾಗಿ ಮಾತನಾಡಿದರು. ಶ್ರೀ ಸಂಗಣ್ಣ ಪಂಜಗಲ್ ನಿರೂಪಿಸಿ ಒಂದಿಸಿದರು. ಅಪಾರ ಜನಸಂಖ್ಯೆಯಲ್ಲಿ ಭಕ್ತರು ಉಪಸ್ಥಿತರಿದ್ದರು.

## ಕ್ರಿಸ್‌ಮಸ್ ಹಬ್ಬದ ಸಂಭ್ರಮ ಲೊಯೋಲಾ ಶಾಲೆಗೆ ಶಾಸಕರ ಭೇಟಿ



ಯುವಮಾರ್ಗ ಸುದ್ದಿ

**ಮಾನ್ವಿ ,ಡಿ.26–** ಕ್ರಿಸ್‌ಮಸ್ ಹಬ್ಬದ ಅಂಗವಾಗಿ ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ. ಹಂಪಯ್ಯ ನಾಯಕ ಹಾಗೂ ರಾಜ್ಯ ಯುವ ಮುಖಂಡರಾದ ರವಿ ಬಸರಾಜು ಪಟ್ಟಣದ ಲೊಯೋಲಾ ಶಾಲೆಗೆ ಭೇಟಿ ನೀಡಿ ಕ್ರೈಸ್ತ ಬಾಂಧವರಿಗೆ ಕ್ರಿಸ್‌ಮಸ್ ಹಬ್ಬದ ಹಾರ್ದಿಕ ಶುಭಾಶಯಗಳನ್ನು ತಿಳಿಸಿದರು.

ಈ ವೇಳೆ ಮಾತನಾಡಿದ ಅವರು, ಕ್ರಿಸ್‌ಮಸ್ ಹಬ್ಬವು ಪ್ರೀತಿ, ಸಹೋದರತ್ವ ಹಾಗೂ ಮಾನವೀಯ ಮೌಲ್ಯಗಳ ಸಂದೇಶವನ್ನು ನೀಡುವ ಹಬ್ಬವಾಗಿದ್ದು, ಸಮಾಜದಲ್ಲಿ ಶಾಂತಿ ಮತ್ತು ಸಾಮರಸ್ಯವನ್ನು ಬೆಳೆಸುವಲ್ಲಿ ಇಂತಹ ಹಬ್ಬಗಳು ಅತ್ಯಂತ ಮಹತ್ವದ್ದೆಂದು ಹೇಳಿದರು. ಎಲ್ಲಾ ಧರ್ಮಗಳ ಹಬ್ಬಗಳನ್ನು ಒಂದೇ ಮನೋಭಾವದಿಂದ ಆಚರಿಸುವ ಮೂಲಕ ಸೌಹಾರ್ದತೆಯ ನಾಡನ್ನು ಮತ್ತಷ್ಟು ಬಲಪಡಿಸಬೇಕೆಂದು ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷರಾದ ಗಫೂರ್ ಸಾಬ್, ಪಂಚ ಗ್ಯಾರಂಟಿಗಳ ಅಧ್ಯಕ್ಷರಾದ ಬಿ.ಕೆ. ಅಮರೇಶಪ್ಪ, ಮುಖಂಡರಾದ ಖಾಲಿದ್ ಸಾಹೇಬ್, ಬಾಲಸ್ವಾಮಿ ಕೊಡ್ಲಿ, ರೌಡರ್ ಸ್ವಾಮಿ, ಸುಭಾಸ್ ನಾಯಕ್, ಜಿ. ನಾಗರಾಜ್ ಸೇರಿದಂತೆ ಅನೇಕ ನಾಯಕರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು

## ಅಂತಿಮ ಆಯ್ಕೆ ಪಟ್ಟಿಯಲ್ಲಿ ಗ್ರಾಮೀಣ ಪ್ರದೇಶ ಯುವಕರು ಅಗ್ನಿ ವೀರ ಸೇನೆಗೆ ಆಯ್ಕೆ

ಯುವಮಾರ್ಗ ಸುದ್ದಿ

**ಮಾನ್ವಿ ,ಡಿ.26–** ತಾಲೂಕಿನ ಗ್ರಾಮೀಣ ಪ್ರದೇಶದ ಸರಕಾರಿ ಕನ್ನಡ ಶಾಲೆಗಳಲ್ಲಿ ಅಭ್ಯಾಸ ಮಾಡಿದ ಅಪ್ಪಟ ಹಳ್ಳಿಯ ಯುವಕರು ರಾಯಚೂರಿನಲ್ಲಿ ನಡೆದ ಅಗ್ನಿವೀರ್ ಸೇನಾ ನೇಮಕಾತಿಯಲ್ಲಿ ನೇಮಕವಾಗಿ ತಾಲೂಕಿನ ಹಾಗೂ ಗ್ರಾಮೀಣ ಪ್ರದೇಶದ ಸರಕಾರಿ ಶಾಲೆಗಳ ಘನತೆ ಹೆಚ್ಚಿಸಿದ್ದಾರೆ ಸರಕಾರಿ ಶಾಲೆಗಳ ಮುಖ್ಯೋಪಾಧ್ಯಾಯರು ಹರ್ಷ ವ್ಯಕ್ತಪಡಿಸಿದ್ದಾರೆ. ಜೊತೆಗೆ ಈಗ ಈ ಯುವಕರು ಪ್ರತಿಷ್ಠಿತ ಸರಕಾರಿ ಹಾಗೂ ಖಾಸಗಿ ಕಾಲೇಜುಗಳಲ್ಲಿ ಪದವಿಯಲ್ಲಿ ಅಭ್ಯಾಸ ಮಾಡುತ್ತಿದ್ದಾರೆ.

ಈ ಯುವಕರು ಅಭ್ಯಾಸದ ಜೊತೆಗೆ ವ್ಯವಸಾಯದಲ್ಲಿಯೂ ಕೂಡ ತಂದೆಯವರ ಜೊತೆಗೆ ಸಹಾಯ ಮಾಡು ತ್ತಿದ್ದರು. ಸೈನಿಕ ಹುದ್ದೆಗೆ ನೇಮಕವಾದ ಯುವಕರು ಚೆನ್ನಬಸವ ನಾಯಕ ಬ್ಯಾಗವಾಟ,ರಾಮಚಂದ್ರ ಕನ್ನೇರಿ ನೀರಮಾನ್ವಿ, ಭೀಮಣ್ಣ ನಾಯಕ ರಾಜಲದಿನ್ನಿ, ಶಿವಕುಮಾರ ನಾಯಕ ನಕ್ಕುಂದಿ, ಯಲ್ಲಪ್ಪ ಕರಡಿ ಅಲ್ದಾಳ ಹಾಗೂ ಬೀರಪ್ಪ ಕೊರವಿ ಈ ಎಲ್ಲಾ ಹಳ್ಳಿಯ ಯುವಕರು ಕಠಿಣ ಪೂರ್ವ ತರಬೇತಿ ಅತ್ಯಂತ ಯಶಸ್ವಿಗೊಳಿಸಲೆಂದು ಮಾನ್ವಿ ತಾಲೂಕಿನ ದೇಶಭಕ್ತರು ತಾಲೂಕ



ಖಾಸಗಿ ಕಾಲೇಜುಗಳ ಉಪನ್ಯಾಸಕರ ಸಂಘದ ಅಧ್ಯಕ್ಷರಾದ ಆಂಜನೇಯ ನಸಲಾಪುರ ಹಾಗೂ ಅಂಬಣ್ಣ ನಾಯಕ ಗುಜ್ಜಲ್ ರಾಜ್ಯಾಧ್ಯಕ್ಷರು ಕರ್ನಾಟಕ ರಾಜ್ಯ ಬೇಡರ ಸಮಿತಿ ಬೆಂಗಳೂರು ಹಾಗೂ ಕಾರ್ಯಕಾರಿಣಿ ಸಮಿತಿ ಸದಸ್ಯರು ಶುಭ ಹಾರೈಸಿದ್ದಾರೆ

## ವಿಪಿಎಮ್ ಶಾಲೆಯಲ್ಲಿ ಅಂತರ ಧರ್ಮೀಯ ಸೌಹಾರ್ದ ಕೂಟ




ಯುವಮಾರ್ಗ ಸುದ್ದಿ

**ತಾಳಿಕೋಟೆ,ಡಿ.26–** ಪಟ್ಟಣದ ವಿಪಿಎಂ ಮತ್ತು ಸೆಕ್ರೆಡ್ ಹಾರ್ಟ್ ಇಂಗ್ಲೀಷ್ ಮಿಡಿಯಂ ಶಾಲೆಯಲ್ಲಿ ಕ್ರಿಸ್ತ ಜಯಂತಿಯ ಪ್ರಯುಕ್ತ ಸರ್ವ ಧರ್ಮ ಸಹಭಾಗಿತ್ವದಲ್ಲಿ ಅಂತರ ಧರ್ಮೀಯ ಸೌಹಾರ್ದ ಕೂಟವನ್ನು ಮಂಗಳವಾರ ಆಯೋಜಿಸಲಾಗಿತ್ತು

ಅಧ್ಯಕ್ಷತೆಯನ್ನು ಬಿಜಾಪುರ ಜೆಸ್ವಿಟ್ ಎಜುಕೇಷನಲ್ & ಚಾರಿಟೇಬಲ್ ಸೊಸೈಟಿ, ವಿಜಯಪುರ ವಲಯ ಮುಖ್ಯಸ್ಥ ಸ್ವಾಮಿ ಸುನೀಲ್ ಫೆರ್ನಾಂಡಿಸ್ ಯೇ.ಸ. ವಹಿಸಿ ಮಾತನಾಡಿ, ಎಲ್ಲ ಧರ್ಮಗಳ ತಿರುಳೊಂದೇ ಆಗಿದ್ದು ಅದು ಪ್ರೀತಿ ಶಾಂತಿ ಮತ್ತು ಮಾನವೀಯತೆಯೇ ಆಗಿದೆ ಎಂದರು.


ಕ್ಷೇತ್ರ ಸಮನ್ವಯ ಅಧಿಕಾರಿ ಆರ್.ಬಿ. ಧಮ್ಮೂರ್ಮಠ ಮಾತನಾಡಿ, ಸರ್ವಧರ್ಮ ಸಮಾನತೆ ಮತ್ತು ಪರಸ್ಪರ ಗೌರವ ಸಮಾಜದ ಸುಸ್ಥಿರತೆಗೆ ಅಗತ್ಯವಾಗಿದೆ ಎಂದರು.

ಸಭೆಯಲ್ಲಿ ಗುಂಡಕನಾಳ ಗಡಿ ಸೋಮನಾಳ ಬೃಹನ್ಮಠದ ಗುರುಲಿಂಗ ಶಿವಾಚಾರ್ಯರು ಮಾತನಾಡಿ,ವಿದ್ಯಾರ್ಥಿಗಳು ಸಹಬಾಳ್ವೆ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಅರಿತು ಮುನ್ನಡೆಯಬೇಕು ಎಂದರು.

ವೇದಿಕೆಯಲ್ಲಿ ಸಿ.ಆರ್.ಪಿ. ರಾಜಸಿಂಗ ವಿಜಯಪುರ, ಬಿ.ಆರ್.ಪಿ ಕಾಶಿನಾಥ ಸಜ್ಜನ, ಕರುಣಾಮಯ ಇನ್ ಫ್ರಾ, ಮುದ್ದೇಬಿಹಾಳ್ ಮಾಲೀಕ ಪ್ರಸಾದ್ ಗಟ್ಟಿ, ಉದ್ಯಮಿದಾರ ಶ್ರೀಶೈಲ್ ದೊಡ್ಡಮನಿ ಉಪಸ್ಥಿತರಿರುವರು ಎಂದು ವಿಪಿಎಂ ಮತ್ತು ಸೆಕ್ರೆಡ್ ಹಾರ್ಟ್ ಇಂಗ್ಲೀಷ್ ಮಿಡಿಯಂ ಶಾಲೆಯ ಸಂಚಾಲಕ ಸ್ವಾಮಿ ಸುನೀಲ್ ಅಂದ್ರಾದೆ ಇದ್ದರು

## ಕ್ರಿಸ್ತ ಜಯಂತಿ ಆಚರಣೆ ಆರ್.ಎಚ್. ನಂಬರ್ ವನ್

ಸಿಂಧನೂರು,ತಿಇಕ್ರಿಸ್ತ ಜಯಂತಿ ಆಚರಣೆ ಆರ್.ಎಚ್. ನಂಬರ್ ವನ್



ಯುವಮಾರ್ಗ ಸುದ್ದಿ

**ಸಿಂಧನೂರು,ಡಿ.26–** ಆರ್.ಎಚ್. ನಂಬರ್ ವನ್ (ಬರ್ಮಾ ಕ್ಯಾಂಪ್) ವ್ಯಾಪ್ತಿಯ ಆರೋಗ್ಯ ಮಾತೆ ದೇವಾಲಯ, ಬರ್ಮಾ ಕ್ಯಾಂಪ್ ನಲ್ಲಿ ಕ್ರಿಸ್ತ ಜಯಂತಿಯನ್ನು ಭಕ್ತಿಭಾವ, ಶಾಂತಿ ಮತ್ತು ಸೌಹಾರ್ದತೆಯಿಂದ ಆಚರಿಸಲಾಯಿತು. ಈ ಪವಿತ್ರ ಕಾರ್ಯಕ್ರಮವನ್ನು ಧರ್ಮ ಕೇಂದ್ರದ ಗುರುಗಳಾದ ಫಾದರ್ ರೆವರೆಂಡ್ ಪಿ.ಜೆ. ಹೃದಯ ರಾಜ್ ಅವರ ಮಾರ್ಗದರ್ಶನದಲ್ಲಿ ನಡೆಸಲಾಗಿದ್ದು, ಕ್ರಿಸ್ತ ಯೇಸುವಿನ ಜನನದ ಮಹತ್ವವನ್ನು ಸಾರುವ ಗೋಧಲಿ ಪ್ರಾರ್ಥನೆ ಹಾಗೂ ವಿಶೇಷ ಕ್ರಿಸ್‌ಮಸ್ ಸಂದೇಶವನ್ನು ನೀಡಲಾಯಿತು.

ಕಾರ್ಯಕ್ರಮದಲ್ಲಿ ದೇವಾಲಯದ ಪಾಲನಾ ಸಮಿತಿ ಸದಸ್ಯರು, ಭಕ್ತರು ಹಾಗೂ ಸ್ಥಳೀಯ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಪ್ರೀತಿ, ತ್ಯಾಗ, ಸೇವೆ ಮತ್ತು ಸಹೋದರತ್ವದ ಸಂದೇಶವನ್ನು ಮನನಗೊಂಡರು. ಕ್ರಿಸ್ತ ಯೇಸುವಿನ ಜನನವು ಮಾನವೀಯ ಮೌಲ್ಯಗಳನ್ನು ಬಲಪಡಿಸುವ ಮಹತ್ವದ ಸಂದೇಶವಾಗಿದ್ದು, ಸಮಾಜದಲ್ಲಿ ಶಾಂತಿ ಮತ್ತು ಏಕತೆಯನ್ನು ಉತ್ತೇಜಿಸುತ್ತದೆ ಎಂದು ಫಾದರ್ ರೆವರೆಂಡ್ ಪಿ.ಜೆ. ಹೃದಯ ರಾಜ್ ಅವರು ತಮ್ಮ ಸಂದೇಶದಲ್ಲಿ ತಿಳಿಸಿದರು.

ಈ ಸಂದರ್ಭದಲ್ಲಿ ಮಾನ್ಯ ಶಾಸಕರಾದ ಬಾದರ್ಲಿ ಹಂಪನಗೌಡ ಅವರು ಕ್ರಿಸ್‌ಮಸ್ ಹಬ್ಬದ ಹಾರ್ದಿಕ ಶುಭಾಶಯಗಳನ್ನು ಕಳುಹಿಸಿ, ಬರ್ಮಾ ಕ್ಯಾಂಪ್ ಪ್ರದೇಶದಲ್ಲಿ ಎಲ್ಲಾ ಧರ್ಮಗಳ ನಡುವೆ ಇರುವ ಸಹಬಾಳ್ವೆ, ಪರಸ್ಪರ ಗೌರವ ಮತ್ತು ಸೌಹಾರ್ದತೆಯನ್ನು ಇನ್ನಷ್ಟು ಬಲಪಡಿಸುವಂತೆ ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ರೆಹಮದ್ ಪಾಷಾ, ಗ್ರಾಮ ಪಂಚಾಯಿತಿಯ ಸರ್ವ ಸದಸ್ಯರು, ಆರ್.ಎಚ್. ನಂಬರ್ ವನ್ ಪ್ರೌಢಶಾಲೆ ಹಾಗೂ ಪ್ರಾಥಮಿಕ ಶಾಲೆಯ ಸಿಬ್ಬಂದಿಗಳು, ಮತ್ತು ಗ್ರಾಮ ಪಂಚಾಯಿತಿ ಸದಸ್ಯರಾದ ಲಾಜರ್ ಸಿರಿಲ್ ಅವರು ಕ್ರಿಸ್ತ ಜಯಂತಿಯ ಅಂಗವಾಗಿ ಕ್ರೈಸ್ತ ಸಮುದಾಯದ ಎಲ್ಲರಿಗೂ ಹಾರ್ದಿಕ ಶುಭಾಶಯಗಳನ್ನು ಕೋರಿದರು. ಕ್ರಿಸ್‌ಮಸ್ ಹಬ್ಬವು ಗ್ರಾಮದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಾಮಾಜಿಕ ಏಕತೆಯನ್ನು ಮತ್ತಷ್ಟು ಗಟ್ಟಿಗೊಳಿಸಲಿ ಎಂದು ಅವರು ಆಶಿಸಿದರು.

ಕ್ರಿಸ್ತ ಜಯಂತಿ ಆಚರಣೆ ಭಕ್ತರ ಹೃದಯಗಳಲ್ಲಿ ಸಂತಸ, ಭರವಸೆ ಮತ್ತು ಮಾನವೀಯ ಮೌಲ್ಯಗಳ ಸಂದೇಶವನ್ನು ಮೂಡಿಸಿ, ಸಮುದಾಯದ ಒಗ್ಗಟ್ಟಿಗೆ ದಿಟ್ಟ ಸಾಕ್ಷಿಯಾಯಿತು.

## ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಪಲ್ಸ್ ಪೋಲಿಯೋ ಕಾರ್ಯಕ್ರಮ: ಶೇ.101 ಗುರಿ ಸಾಧನೆ

ಯುವಮಾರ್ಗ ಸುದ್ದಿ

**ಸಿಂಧನೂರು,ಡಿ.26–** ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ಆಯೋಜಿಸಲಾದ ಪಲ್ಸ್ ಪೋಲಿಯೋ ಕಾರ್ಯಕ್ರಮವು ಕೊನೆಯ ದಿನದಂದು ಅತ್ಯಂತ ಯಶಸ್ವಿಯಾಗಿ ಪೂರ್ಣಗೊಂಡಿತು. ಈ ಕಾರ್ಯಕ್ರಮದ ಮೂಲಕ ಯಾವುದೇ ಮಗು ಪೋಲಿಯೋ ಲಸಿಕೆಯಿಂದ ವಂಚಿತವಾಗಬಾರದು ಎಂಬ ಉದ್ದೇಶದೊಂದಿಗೆ ಆರೋಗ್ಯ ಇಲಾಖೆ ಸಮರ್ಪಕ ಯೋಜನೆ ಹಾಗೂ ಕಾರ್ಯಾಚರಣೆಯನ್ನು ಕೈಗೊಂಡಿತ್ತು.

ಈ ಕಾರ್ಯಕ್ರಮದಲ್ಲಿ ಗುರಿಯಾಗಿದ್ದ 8,290 ಮಕ್ಕಳಿಗೆ ಮತ್ತು 15,912 ಮನೆಗಳಿಗೆ ಪಲ್ಸ್ ಪೋಲಿಯೋ ಲಸಿಕೆ ತಲುಪಿಸುವ ಗುರಿ ಹೊಂದಲಾಗಿತ್ತು. ಕಾರ್ಯಕ್ಷೇತ್ರದಲ್ಲಿ ನಡೆದ ತೀವ್ರ ಮನೆ ಮನೆ ಭೇಟಿ, ಮರುಭೇಟಿ ಹಾಗೂ ಮೇಲ್ವಿಚಾರಣೆಯ ಫಲವಾಗಿ 8,377 ಮಕ್ಕಳಿಗೆ ಮತ್ತು 15,917 ಮನೆಗಳಿಗೆ ಪಲ್ಸ್ ಪೋಲಿಯೋ ಲಸಿಕೆ ನೀಡಲಾಗಿದ್ದು, ಇದರೊಂದಿಗೆ ಶೇ.101 ಸಾಧನೆ ಮಾಡಲಾಗಿದೆ. ಇದು ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಕಾರ್ಯಕ್ಷಮತೆ ಹಾಗೂ ಆಶಾ ಕಾರ್ಯಕರ್ತರ ಅಕ್ಷಯ ಶ್ರಮವನ್ನು ಸ್ಪಷ್ಟವಾಗಿ ಪ್ರತಿಬಿಂಬಿಸುತ್ತದೆ.

ಈ ಕುರಿತು ಮಾತನಾಡಿದ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಾದ ಡಾ. ಮೇರಿ ಭಂಡಾರಿ ಅವರು, "ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಯಾವುದೇ ಮಗು ಲಸಿಕೆಯಿಂದ ತಪ್ಪಿಸಿಕೊಳ್ಳಬಾರದು ಎಂಬ ಧ್ಯೇಯದೊಂದಿಗೆ ಆರೋಗ್ಯ ಸಿಬ್ಬಂದಿ, ಆಶಾ ಕಾರ್ಯಕರ್ತರು ಹಾಗೂ ವ್ಯಾಕ್ಸಿನೇಟರ್‌ಗಳು ಸಮರ್ಪಣೆಯಿಂದ ಕೆಲಸ ಮಾಡಿದ್ದಾರೆ. ಸಾರ್ವಜನಿಕರ ಸಹಕಾರದಿಂದ ಶೇ.101 ಗುರಿ ಸಾಧಿಸಲು ಸಾಧ್ಯವಾಗಿದೆ" ಎಂದು ತಿಳಿಸಿದರು.



ಕಾರ್ಯಕ್ರಮದ ಅನುಷ್ಠಾನ ಮತ್ತು ಮೇಲ್ವಿಚಾರಣೆಯಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶ್ರೀ ಹನುಮಂತ, ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿಗಳಾದ ಕಮಲ, ಆಶಾ ಕಾರ್ಯಕರ್ತರಾದ ಹುಲಿಗೆಮ್ಮ, ಕವಿತಾ ಸೇರಿದಂತೆ ಇತರ ಆರೋಗ್ಯ ಸಿಬ್ಬಂದಿ ಸಕ್ರಿಯವಾಗಿ ಭಾಗವಹಿಸಿದ್ದರು. ಮನೆ ಮನೆಗೆ ಭೇಟಿ ನೀಡಿ, ಮೊದಲ ಹಂತದಲ್ಲಿ ಲಸಿಕೆ ಪಡೆಯದೆ ಉಳಿದ ಮಕ್ಕಳನ್ನು ಗುರುತಿಸಿ ಅವರಿಗೆ ಲಸಿಕೆ ಹಾಕುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲಾಯಿತು.

ಮಕ್ಕಳನ್ನು ಪೋಲಿಯೋ ಮುಕ್ತಗೊಳಿಸುವ ರಾಷ್ಟ್ರೀಯ ಉದ್ದೇಶದೊಂದಿಗೆ ಆರೋಗ್ಯ ಇಲಾಖೆ ಕೈಗೊಂಡಿರುವ ಈ ಪಲ್ಸ್ ಪೋಲಿಯೋ ಕಾರ್ಯಕ್ರಮವು ಸಾರ್ವಜನಿಕ ಆರೋಗ್ಯ ರಕ್ಷಣೆಯ ದೃಷ್ಟಿಯಿಂದ ಮಹತ್ವದ ಸಾಧನೆಯಾಗಿದ್ದು, ಮುಂದಿನ ದಿನಗಳಲ್ಲಿಯೂ ಇದೇ ಉತ್ಸಾಹ ಮತ್ತು ಜವಾಬ್ದಾರಿಯೊಂದಿಗೆ ಕಾರ್ಯ ಮುಂದುವರಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ರಾಯಚೂರು ಜಿಲ್ಲೆಯಲ್ಲಿ ಪಲ್ಸ್ ಪೋಲಿಯೋ ಶೇ.100.01 ರಷ್ಟು ಸಾಧನೆ



ಯುವಮಾರ್ಗ ಸುದ್ದಿ

**ರಾಯಚೂರು,ಡಿ.26–** ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನದಡಿಯಲ್ಲಿ, ಹುಟ್ಟಿನಿಂದ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಎರಡು ಹನಿ ಪೋಲಿಯೋ ಲಸಿಕೆ ಹಾಕುವ ಅಭಿಯಾನ ಡಿಸೆಂಬರ್ 21ರಿಂದ ಆರಂಭವಾಗಿದ್ದು, ಜಿಲ್ಲೆಯ ರಾಯಚೂರು, ಲಿಂಗಸುಗೂರು, ಸಿಂಧನೂರು, ಮಾನವಿ, ದೇವದುರ್ಗ ತಾಲ್ಲೂಕಗಳಲ್ಲಿ ಮೊದಲ ದಿನ ಡಿ.21ರಂದು ಒಟ್ಟು 2,59,984 ಮಕ್ಕಳ ಪೈಕಿ 2,47,052 ಮಕ್ಕಳಿಗೆ ಲಸಿಕೆ ಹಾಕುವ ಮೂಲಕ ಶೇ.95.02 ರಷ್ಟು ಸಾಧನೆ ಮಾಡಲಾಗಿದೆ.

ಡಿಸೆಂಬರ್ 24 ರವರೆಗೆ ಉಳಿದ 12,932 ಮಕ್ಕಳಿಗು ಲಸಿಕೆ ಹಾಕಿ ಒಟ್ಟು 2,60, 002 ಮಕ್ಕಳನ್ನು ತಲುಪಿ ಶೇ.100.02ರಷ್ಟು ಸಾಧನೆ ಮಾಡಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸುರೇಂದ್ರ ಬಾಬು ಅವರು ತಿಳಿಸಿದ್ದಾರೆ.

ಡಿಸೆಂಬರ್ 21 ರಂದು, ಎನ್ ಎಸ್ ಬೋಸರಾಜು, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಕರ್ನಾಟಕ ಸರಕಾರ ಹಾಗೂ ಜಿ. ಕುಮಾರ್ ನಾಯಕ ಸಂಸದರು ರಾಯಚೂರು ಲೋಕಸಭಾ ಕ್ಷೇತ್ರ ಅವರು ಅಭಿಯಾನಕ್ಕೆ ಚಾಲನೆ ನೀಡಿದ್ದರು.

ಗುರಿ ಸಾಧನೆಗಾಗಿ ಜಿಲ್ಲೆಯ ಎಲ್ಲಾ ಮಕ್ಕಳಿಗೂ ಲಸಿಕೆ ಹಾಕುವ ದಿಶೆಯಲ್ಲಿ 601 ಕ್ಲಿಷ್ಟಕರವಾದ ವಸತಿ ಪ್ರದೇಶಗಳನ್ನು, 203 ವಲಸೆ ಜನವಸತಿ ಪ್ರದೇಶಗಳನ್ನು ಗುರುತಿಸಲಾಗಿತ್ತು. ಜಿಲ್ಲೆಯಾದ್ಯಂತ 1132 ಲಸಿಕಾ ಬೂತ್‌ಗಳು 1,133 ಮನೆ ಭೇಟಿ ನೀಡುವ ತಂಡಗಳು, ಹೆಚ್ಚು ಜನಸೇರುವ ಹಾಗೂ ಸಂತೆ–ಮಾರುಕಟ್ಟೆ, ಬಸ್ ನಿಲ್ದಾಣ ಮತ್ತು ಇತರೆ ಜನ ಹೆಚ್ಚು ಸೇರುವ ಸ್ಥಳಗಳಲ್ಲಿ ಲಸಿಕೆ ಹಾಕಲು 53 ತಂಡಗಳು ಮತ್ತು ವಲಸೆ ಪ್ರದೇಶಗಳಾದ ಇಟ್ಟಿಗೆ ಭಟ್ಟಿ, ಕಟ್ಟಡ ಕಾಮಗಾರಿ ಪ್ರದೇಶ, ಕಬ್ಬು ಕಡಿಯುವ ಸ್ಥಳ, ಕುರಿಹಟ್ಟಿ ಮುಂತಾದ ಸ್ಥಳಗಳಲ್ಲಿ ಲಸಿಕೆ ಹಾಕಲು 33 ಸಂಚಾರಿ ತಂಡಗಳ ಮೂಲಕ ಸಾಧನೆ ಮಾಡಲಾಗಿದೆ.

ಈ ಸಾಧನೆಯನ್ನು ಸಾಧಿಸಲು ಆರೋಗ್ಯ ಇಲಾಖೆಯ ಸಿಬ್ಬಂದಿಯೊಂದಿಗೆ ರಿಮ್ಸ್ ಆಸ್ಪತ್ರೆ, ನವೋದಯ ವೈದ್ಯಕೀಯ ಕಾಲೇಜು, ನಂದಿನಿ, ಎಸ್‌ಕೆಇ ಪ್ಯಾರಾ ಮೆಡಿಕಲ್ ಕಾಲೇಜ್,




ರೋಟರಿ, ಲಯನ್ಸ್, ರೆಡ್‌ಕ್ರಾಸ್ ಹಾಗೂ ಇತರೆ ಸಂಘ ಸಂಸ್ಥೆಯವರು ಸ್ವಯಂ ಸೇವಕರಾಗಿ, ಪೋಲಿಯೋ ವ್ಯಾಕ್ಸಿನೇಟರ್ ಆಗಿ ಕಾರ್ಯನಿರ್ವಹಿಸಿದ್ದಾರೆ. ಅಲ್ಲದೇ 248 ಮೇಲ್ವಿಚಾರಕರು ಹಾಗೂ ಡಾ ನಂದೀತಾ ಎಮ್ ಎನ್ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಸೇರಿದಂತೆ ಜಿಲ್ಲೆಯ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳಾದ ಡಾ.ಗಣೇಶ್, ಡಾ.ಶಿವಕುಮಾರ್, ಡಾ.ಶಾಕೀರ್, ಚಂದ್ರಶೇಖರ್ ನೋಡಲ್ ಅಧಿಕಾರಿಗಳಾಗಿ ಕಾರ್ಯ

# ರಾಷ್ಟ್ರೀಯ ಮತದಾರ ದಿನಾಚರಣೆ

## ರಾಯಚೂರಲ್ಲಿ ಪ್ರಬಂಧ ಸ್ಪರ್ಧೆ ನಡೆಸಿ ವಿದ್ಯಾರ್ಥಿಗಳಿಗೆ ಜಾಗೃತಿ



ಯುವಮಾರ್ಗ ಸುದ್ದಿ

**ರಾಯಚೂರು,ಡಿ.26:**ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಮತದಾರ ದಿನಾಚರಣೆಯ ಪ್ರಯುಕ್ತ ಜಿಲ್ಲಾಮಟ್ಟದ ಪ್ರಬಂಧ ಸ್ಪರ್ಧೆಯು ಇತ್ತೀಚೆಗೆ ನಗರದ ಜಲ ನಿರ್ಮಲ ಸಭಾಂಗಣದಲ್ಲಿ ನಡೆಯಿತು. ಶಾಲಾ ಮಟ್ಟದಲ್ಲಿ ಹಾಗೂ ತಾಲೂಕು ಮಟ್ಟದಲ್ಲಿ ಈ ಹಿಂದೆ ನಡೆದ ಪ್ರಬಂಧ ಸ್ಪರ್ಧೆಯಲ್ಲಿ ಭಾಗಿಯಾದ ಪ್ರಬಂಧ ವಿಜೇತರು ಜಿಲ್ಲಾಮಟ್ಟದ ಸ್ಪರ್ಧೆಗಾಗಿ ಜಲನಿರ್ಮಲ ಸಭಾಂಗಣದಲ್ಲಿ ಸೇರಿದ್ದರು.

ಪ್ರಜಾಪ್ರಭುತ್ವದಲಿ ಮತದಾನ ಮತ್ತು ಚುನಾವಣೆ ವಿಷಯಗಳ ಬಗ್ಗೆ ವಿದ್ಯಾರ್ಥಿಗಳಿಗೆ ಪ್ರಬಂಧದ ವಿಷಯ ನೀಡಲಾಯಿತು.

ಪ್ರೌಢಶಾಲೆ ವಿಭಾಗ, ಪದವಿ ಪೂರ್ವ ಕಾಲೇಜು ವಿಭಾಗ ಮತ್ತು ಪದವಿ ಮತ್ತು ವಿಶ್ವವಿದ್ಯಾಲಯಗಳ ವಿಭಾಗವಾರು ಪ್ರತ್ಯೇಕ ವಿಷಯಗಳ ಮೇಲೆ ವಿದ್ಯಾರ್ಥಿಗಳು ಪ್ರಬಂಧ ಬರೆದರು.

ಸಸಿಗೆ ನೀರು ಹಾಕಿ ಸ್ಪರ್ದೇ ಉದ್ಘಾಟಿಸಿದ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ ಮಾತನಾಡಿ, ನಮ್ಮದು ಪ್ರಜಾಪ್ರಭುತ್ವ ರಾಷ್ಟ್ರವಾಗಿದೆ. ವಿಶ್ವದಲ್ಲಿಯೇ ಭಾರತದ ಸಂವಿಧಾನವು ಲಿಖಿತ ಸಂವಿಧಾನವಾಗಿದೆ. ಬೇರೆ ದೇಶಗಳಿಗೆ ಹೋಲಿಸಿದರೆ, ನಮಗೆ ಬೇಕಾಗಿರುವಂತ ಜನನಾಯಕನನ್ನು ಆಯ್ಕೆ ಮಾಡುವಂತಹ ಅಧಿಕಾರವು ಮತದಾರರಿಗೆ ಸಂವಿಧಾನಬದ್ಧವಾಗಿ ಬಂದಿದೆ.

ಮಹತ್ವದ ಮತದಾನದ ಅವಕಾಶವು 18 ವರ್ಷ ಮೇಲ್ಪಟ್ಟ ಎಲ್ಲರಿಗೂ ಸಮಾನವಾಗಿ ಸಿಕ್ಕಿರುವುದು ಒಂದು ಸುವರ್ಣ ಅವಕಾಶ. ರಾಷ್ಟ್ರ ಮತ್ತು ರಾಜ್ಯ ಚುನಾವಣಾ ಆಯೋಗವು ಇಂತಹ ಪ್ರಬಂಧ ಸ್ಪರ್ಧೆಯನ್ನು ಆಯೋಜನೆ ಮಾಡುವುದರ ಮೂಲಕ ವಿದ್ಯಾರ್ಥಿಗಳಿಗೆ ಚುನಾವಣೆ ಮತ್ತು ಮತದಾನದ ಅರಿವು ಮೂಡಿಸುವಂತಹ ಕೆಲಸವನ್ನು ಮಾಡುತ್ತಿದೆ.

ಚುನಾವಣೆ ಮತ್ತು ಮತದಾನ ಸಂದರ್ಭದಲ್ಲಿ ಹಲವಾರು ರೀತಿಯ ಕಾರ್ಯ ಚಟುವಟಿಕೆಗಳು ನಡೆಯುತ್ತಿದ್ದು ಅವುಗಳ ಕುರಿತು ಅರಿವನ್ನು ಮೂಡಿಸುವಂತಹ ಹಿನ್ನೆಲೆಯಲ್ಲಿ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆಯನ್ನು ಆಯೋಜನೆ ಮಾಡಲಾಗಿದೆ. ಇಂಥ ಸ್ಪರ್ಧೆಗಳು ವಿದ್ಯಾರ್ಥಿಗಳ ಚುನಾವಣೆ ಮತ್ತು ಮತದಾನದ ಬಗ್ಗೆ ತಿಳಿದುಕೊಳ್ಳಲು ಅವಶ್ಯಕವಾಗಿವೆ ಎಂದು ತಿಳಿಸಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕರಾದ ಕೆ.ಡಿ. ಬಡಿಗೇರ ಅವರು ಮಾತನಾಡಿ, ನಮ್ಮ ಮತದಾನ ವ್ಯವಸ್ಥೆಯು ಪ್ರಜಾಪ್ರಭುತ್ವದ ತಳಹದಿಯಾಗಿದೆ ಎಂದರು.

ಈ ಪ್ರಬಂಧ ಸ್ಪರ್ಧೆಯನ್ನು ರಾಯಚೂರ ಜಿಲ್ಲೆಯಲ್ಲಿ ಅಚ್ಚುಕಟ್ಟಾಗಿ ನಡೆಸಿ ರಾಷ್ಟ್ರೀಯ ಮತದಾರ ದಿನಾಚರಣೆಯನ್ನು ಯಶಗೊಳಿಸಲು ಶ್ರಮಿಸಿರುವುದು ಅಭಿನಂದನಾರ್ಹ ಸಂಗತಿ ಎಂದರು.

ರಾಷ್ಟ್ರೀಯ ಮತದಾರ ದಿನಾಚರಣೆ ಕಾರ್ಯಕ್ರಮದ ಶಾಲಾ ಶಿಕ್ಷಣ ವಿಭಾಗದ ನೋಡಲ್ ಅಧಿಕಾರಿ ಡಾ. ದಂಡಪ್ಪ ಬಿರಾದಾರ ಮಾತನಾಡಿ, ನಮ್ಮ ದೇಶದಲ್ಲಿ ಚುನಾವಣೆಗಳು ಮತ್ತು ಮತದಾನ ಪ್ರಕ್ರಿಯೆಗಳು ನಿರಂತರವಾಗಿ ನಡೆಯುತ್ತವೆ. ಒಂದು ಮತ ದೇಶಕೆ ಹಿತ. ನನ್ನ ಮತ ನನ್ನ ಧ್ವನಿ. ಮತದಾನಕ್ಕೆ ಮಹತ್ವ ಶಕ್ತಿ ಇದೆ ಎಂಬುದನ್ನು ಎಲ್ಲರೂ ಅರಿಯಬೇಕು ಎಂದು ತಿಳಿಸಿದರು.

ಸಮಾರಂಭದಲ್ಲಿ ಪದವಿ ಪೂರ್ವ ಶಿಕ್ಷಣ ವಿಭಾಗದ ಮಂಜುನಾಥ್, ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾದ ಡಾ. ಚನ್ನಬಸವ, ಡಾ.ಶಂಕರನಂದಾ ಜಿ. ಉಪಸಿತರಿದ್ದರು.

ರಾಯಚೂರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಶಿಕ್ಷಣ ಸಂಯೋಜಕರಾದ ಸಿ ಪಿ ಓದಿಸೊವಮಠ ಸ್ವಾಗತಿಸಿದರು. ವಂದಿಸಿದರು.

# ರಾಜ್ಯಮಟ್ಟದ ಸ್ಕೌಟ್ ಗೈಡ್ ಜಂಬೋರೇಟ್ ಗೆ ಮಾನ್ವಿ ವಿದ್ಯಾರ್ಥಿಗಳು ಪ್ರಯಾಣ



ಯುವಮಾರ್ಗ ಸುದ್ದಿ

**ಮಾನ್ವಿ,ಡಿ.26:** ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯ ಸಂಸ್ಥೆ ಬೆಳಗಾವಿಯಲ್ಲಿ ಆಯೋಜಿಸಿರುವ ಸ್ಕೌಟ್ ಗೈಡ್ ರಾಜ್ಯ ಜಾಂಬೊರೇಟ್ ನಲ್ಲಿ ಭಾಗವಹಿಸಲು, ನಮ್ಮ ವಿವಿಧ ಕೌಶಲಗಳನ್ನು ಪ್ರದರ್ಶಿಸಲು ಮಾನ್ವಿ ಸ್ಥಳೀಯ ಸಂಸ್ಥೆಯ ನೇತಾಜಿ ಶಾಲೆ, ಕಾಕಟಿಯ ಶಾಲೆ, ಗುರುಕುಲ ಶಾಲೆಯ ಸುಮಾರು 50 ವಿದ್ಯಾರ್ಥಿಗಳು ಭಾಗವಹಿಸಲು ಪ್ರಯಾಣ ಬೆಳೆಸಿದರು. ಸ್ಥಳೀಯ ಸಂಸ್ಥೆಯ ಅಧ್ಯಕ್ಷರಾದ ಬಿ ಬಲರಾಮಕೃಷ್ಣ ಹಸಿರು ಧ್ವಜ ಚಾಲನೆ ನೀಡುವ ಮೂಲಕ ಮಕ್ಕಳಿಗೆ ಬಿಳ್ಕೊಟ್ಟರು. ಈ ಸಂದರ್ಭದಲ್ಲಿ ಕಾರ್ಯದರ್ಶಿ ಎಮ್ ರಾಮಲಿಂಗಪ್ಪ, ಜಂಟಿ ಕಾರ್ಯದರ್ಶಿ ನರಸಿಂಹಮೂರ್ತಿ ದೇಸಾಯಿ, ನೇತಾಜಿ ಶಾಲೆಯ ಕಾರ್ಯದರ್ಶಿ, ವಿಜಯಲಕ್ಷ್ಮ ಕಾಕತೀಯ ಶಾಲೆಯ ಮುಖ್ಯ ಗುರು ವೀರಭದ್ರಗೌಡ, ಗುರುಕುಲ ಶಾಲೆಯ ಕಾರ್ಯದರ್ಶಿ ಜಿತೇಂದ್ರ ಸ್ವಾಮಿ, ಮುಖ್ಯ ಗುರು ಅನುರಾಧ, ತರಬೇತಿ ಸಲಹೆಗಾರ ವಿಶ್ವನಾಥ್ ಗೌಡ ದಳ ನಾಯಕರಾದ ವೆಂಕಟೇಶ್ ಆನಂದ್ ಶಿವರಾಜಪ್ಪ ನಾಯಕೀಯರಾದ ಪರಿಮಳ, ಬಸ್ಸಮ್ಮ, ಸುಪ್ರಿಯಾ, ಇತರೆ ಶಿಕ್ಷಕರು, ಪಾಲಕರು ಹಾಗೂ ಪದಾಧಿಕಾರಿಗಳು ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಮಕ್ಕಳಿಗೆ ಸ್ಥಳೀಯ ಸಂಸ್ಥೆಯು ವಿಶೇಷ ಬಸ್ಸಿನ ವ್ಯವಸ್ಥೆಯನ್ನು ಮಾಡಿತ್ತು.

# ಚಾಗಭಾವಿ ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಹಾಗೂ ವಿಕಲಚೇತನರ ಸಮನ್ವಯ ಸಭೆ




ಯುವಮಾರ್ಗ ಸುದ್ದಿ

**ಸಿರವಾರ,ಡಿ.26:** ತಾಲೂಕಿನ ಚಾಗಭಾವಿ ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿ ಜಿಲ್ಲಾಧಿಕಾರಿಗಳ ಕಾರ್ಯಾಲಯ ನಗರಾಭಿವೃದ್ಧಿ ಕೋಶ, ರಾಯಚೂರು, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ರಾಯಚೂರು ಹಾಗೂ ಗ್ರಾಮ ಪಂಚಾಯತ್ ಕಾರ್ಯಾಲಯ, ಚಾಗಭಾವಿ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಹಾಗೂ ವಿಕಲಚೇತನರ ಸಮನ್ವಯ ಸಭೆ ಅತ್ಯಂತ ಯಶಸ್ವಿಯಾಗಿ ನಡೆಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಸಂಕಲ್ಪ ವಿಕಲಚೇತನರ ಒಕ್ಕೂಟದ ಗೌರವಾಧ್ಯಕ್ಷರಾದ ದೇಸಾಯಿ ದೊತರಬಂಡಿ ಅವರು, ವಿಶ್ವ ವಿಕಲಚೇತನರ ದಿನಾಚರಣೆಯ ಮಹತ್ವವನ್ನು ವಿವರಿಸಿದರು. ವಿಕಲಚೇತನರ ಬಗ್ಗೆ ಸಮಾಜದಲ್ಲಿ ಬಳಸಲಾಗುವ ಅವಮಾನಕಾರಿ ಹಾಗೂ ನೋವುಂಟುಮಾಡುವ ಪದಗಳನ್ನು ಸಂಪೂರ್ಣವಾಗಿ ತ್ಯಜಿಸಬೇಕೆಂದು ಅವರು ಮನವಿ ಮಾಡಿದರು. ವಿಕಲಚೇತನರು ಸಹ ಸಮಾನ ಗೌರವ, ಹಕ್ಕು ಹಾಗೂ ಅವಕಾಶಗಳಿಗೆ ಅರ್ಹರಾಗಿದ್ದು, ಗೌರವಪೂರ್ಣ ಭಾಷೆ ಮತ್ತು ಮಾನವೀಯ ವರ್ತನೆಯೇ ನಿಜವಾದ ಸಬಲೀಕರಣಕ್ಕೆ ದಾರಿ ಎಂದು ತಿಳಿಸಿದರು.

ಸಮನ್ವಯ ಸಭೆಯಲ್ಲಿ ವಿಕಲಚೇತನರ ಹಕ್ಕುಗಳು, ಸರ್ಕಾರದಿಂದ ದೊರೆಯುವ ಸೌಲಭ್ಯಗಳು, ಪುನರ್ವಸತಿ ಕ್ರಮಗಳು, ಸಾಮಾಜಿಕ ಒಗ್ಗಟ್ಟು ಹಾಗೂ ಜಾಗೃತಿ ಕುರಿತು ಸವಿಸ್ತಾರ ಚರ್ಚೆ ನಡೆಯಿತು. ವಿಕಲಚೇತನರನ್ನು ಕೇವಲ ಸಹಾನುಭೂತಿಯಿಂದ ಅಲ್ಲ, ಗೌರವ ಮತ್ತು ಸಮಾನತೆಯ ದೃಷ್ಟಿಯಿಂದ ನೋಡುವ ಮನೋಭಾವ ಸಮಾಜದಲ್ಲಿ ಬೆಳೆಸಬೇಕೆಂಬ ಸಂದೇಶವನ್ನು ಕಾರ್ಯಕ್ರಮ ನೀಡಿತು.

ಈ ಸಂದರ್ಭದಲ್ಲಿ ಪಂಚಾಯತಿ ಕರ ವಸಲಿಗಾರರಾದ ಮಲ್ಲಯ್ಯ, ಸಂಕಲ್ಪ ವಿಕಲಚೇತನರ ಒಕ್ಕೂಟದ ಜಿಲ್ಲಾಧ್ಯಕ್ಷರಾದ ಶಿವಕುಮಾರ್ ಚಲ್ಮಲ್, ಹೊಸಬೆಳಕು ಸಂಜೀವಿನಿ ಒಕ್ಕೂಟದ ಮುಖ್ಯ ಪುಸ್ತಕ ಬರಹಗಾರರಾದ ಗಾಯತ್ರಿ, ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಾದ ಮಲ್ಲಿಕಾರ್ಜುನ, ಸಿರವಾರ ಪಟ್ಟಣ ಪಂಚಾಯಿತಿ ನಗರ ಪುನರ್ವಸತಿ ಕಾರ್ಯಕರ್ತರು ಸೇರಿದಂತೆ ಅನೇಕ ವಿಕಲಚೇತನ ಬಂಧುಗಳು ಉಪಸ್ಥಿತರಿದ್ದು ಕಾರ್ಯಕ್ರಮಕ್ಕೆ ಶೋಭೆ ತಂದರು

# ಧರ್ಮಸಿಂಗ್ ಜನ್ಮದಿನದಂಗವಾಗಿ ಅನ್ನಸಂತರ್ಪಣೆ



**ಅಫಜಲಪುರ: ಡಿ.26:**ಈ ನಾಡು ಕಂಡ ಜನಪ್ರಿಯ ಮುಖ್ಯಮಂತ್ರಿ ಹಾಗೂ ಅಜಾತಶತ್ರು ಸನ್ಮಾನ್ಯ ದಿ.ಎನ್ ಧರ್ಮಸಿಂಗ ಹುಟ್ಟು ಹಬ್ಬದ ಪ್ರಯುಕ್ತ,ಅನ್ನಸಂತರ್ಪಣೆ ಕಾರ್ಯಕ್ರಮ ಶ್ರೀ ಅಮರಸಿಂಗ ರಜಪೂತ ಅವರ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮಕ್ಕೆ ಭಾಗವಹಿಸಿ ಅಮರಸಿಂಗ ರಜಪೂತ ಅವರು ಮಾತನಾಡಿ ಈ ಭಾಗದ 371 ಜೆ ಕಲಂ ಜಾರಿಗೆ ರುವಾರಿಗಳು ಎನ್ ಧರ್ಮಸಿಂಗ್ ಮತ್ತು ಮಲ್ಲಿಕಾರ್ಜುನ ಖರ್ಗೆಯವರು, ಹಲವಾರು ಅಭಿವೃದ್ಧಿ ಕಾಮಗಾರಿಗಳು ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದು. ಅವರ ನೆನಪು ಸದಾ ಉಳಿಯಲಿ ಅವರು ಹಾಕಿ ಕೊಟ್ಟ ಮಾರ್ಗದಲ್ಲಿ ಸಾಗೋಣ ಎಂದು ಹೇಳಿದರು. ಶರಣು ಕುಂಬಾರ ಅಂಬರೀಶ್ ಬುರ್ಲಿ ಮಾತನಾಡಿದರು , ಶಂಕರಸಿಂಗ ರಜಪೂತ ಸ್ವಾಗತಿಸಿದರು. ಈ ಸಂಧರ್ಭದಲ್ಲಿ ಪುರಸಭೆ ಉಪಾಧ್ಯಕ್ಷರಾದ ಶಿವಕುಮಾರ್ ಪದಕಿ ಕಾಂಗ್ರೆಸ್ ಯುವ ಘಟಕದ ಅಧ್ಯಕ್ಷ ಅಣವೀರಯ್ಯ ಮಠಪತಿ , ರಾಜಶೇಖರ್ ಪಾಟೀಲ , ಶಂಕರಸಿಂಗ ರಜಪೂತ,ಸುರೇಶಸಿಂಗ ರಜಪೂತ, ಗೋವಿಂದಸಿಂಗ ಲಾಹೋರಕರ, ವಿಜಯಸಿಂಗ ರಜಪೂತ, ಸಾಗರಸಿಂಗ ಠಾಕೂರ್, ಶಂಕರಸಿಂಗ ಕು. ರಜಪೂತ, ಮಾಣಿಕಸಿಂಗ, ಬಾಲಾಜಿಸಿಂಗ, ಅಜಯ ಸಿಂಗ ರಜಪೂತ , ಅವಿನಾಶಿಂಗ, ಅರ್ಜುನಸಿಂಗ ಇತರ ಸಮಾಜ ಬಾಂಧವರು, ಧರ್ಮಸಿಂಗ್ ಸಾಹೇಬರ ಅಭಿಮಾನಿಗಳು ಭಾಗವಹಿಸಿದ್ದರು.

# ವಾಜಪೇಯಿ ಜನ್ಮದಿನೋತ್ಸವ

**ಹೊಸಪೇಟೆ, ಡಿ26:**ವಿಜಯನಗರ: ಹೊಸಪೇಟೆಯ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಗುರುವಾರ ಮಾಜಿ ಪ್ರಧಾನಿ, ಅಜಾತಶತ್ರು ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮದಿನದ ಶತಮಾನೋತ್ಸವವನ್ನು ಆಚರಿಸಲಾಯಿತು. ನಗರಸಭೆ ಉಪಾಧ್ಯಕ್ಷ ಬಿ.ಜಿವರತ್ನ, ಹೊಸಪೇಟೆ ಮಂಡಲ ಅಧ್ಯಕ್ಷ ಶಂಕರ್ ಮೇಟಿ, ಅಶೋಕ್ ಜೀರೆ, ವಿದ್ವಾನ್ ಕೆ.ಎಸ್. ರಾಘವೇಂದ್ರ, ಕಾಸಟಿ ಉಮಾಪತಿ, ಶಶಿಧರ್ ಸ್ವಾಮಿ, ರೇವಣಸಿದ್ದಪ್ಪ, ಜೆ.ಆರ್ ಮಧುಸೂದನ್, ಆರ್.ಶ್ರೀನಿವಾಸ್. ಮಧುರ ಚೆನ್ನ ಶಾಸ್ತ್ರಿ ಹಿರೇಮಠ. ಎಚ್ ನಟರಾಜ್ ಹಾಗೂ ಕಾರ್ಯಕರ್ತರು ಪಾಲ್ಗೊಂಡಿದ್ದರು.



ಯುವ ಮಾರ್ಗ
www.yuvamarga.com Yuva Marga yuva_marga_

## ಲೋಕಕಲ್ಯಾಣಾರ್ಥವಾಗಿ ಅಖಂಡ ಶ್ರೀಲಲಿತಾಸಹಸ್ರನಾಮ ಪಾರಾಯಣ



ಯುವಮಾರ್ಗ ಸುದ್ದಿ

**ಸಿಂಧನೂರು,ಡಿ.26–** ಇಂದು ನಗರದ ಬಪ್ಪುರು ರಸ್ತೆಯಲ್ಲಿರುವ ರಾಮಕೃಷ್ಣ ವಿವೇಕಾನಂದ ಆಶ್ರಮದಲ್ಲಿ ಆಶ್ರಮದ ಅಧ್ಯಕ್ಷರಾದ ಪೂಜ್ಯ ಶ್ರೀ ಸ್ವಾಮಿ ಸದಾನಂದ ಮಹಾರಾಜ್ ರವರ ನೇತೃತ್ವದಲ್ಲಿ ಶ್ರೀಮಾತೆ ಶಾರದಾದೇವಿಯವರ ಪ್ರೀತ್ಯರ್ಥವಾಗಿ ಹಾಗೂ ಲೋಕಕಲ್ಯಾಣಾರ್ಥವಾಗಿ "ಅಖಂಡ ಶ್ರೀಲಲಿತಾಸಹಸ್ರನಾಮವನ್ನು" ಬೆಳಿಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ನಿರಂತರವಾಗಿ 12 ಗಂಟೆಗಳ ಮಹಿಳಾ ಭಕ್ತರು ಪಾರಾಯಣ ಮಾಡಿದರು.. ಕಾರ್ಯಕ್ರಮದಲ್ಲಿ ನಾಗವೇಣಿ ವನಿತಾ ಮಹಾಲಕ್ಷ್ಮಿ ನೀಲಮ್ಮ ಅಲಬನೂರ ಶ್ವೇತ, ಅಂಜಲಿ ರಾಧಿಕಾ ಅಶ್ವಿನಿ ಜ್ಯೋತಿ ಮಹಾಲಕ್ಷ್ಮಿ ಶೃತಿ ಸುಮಾ ವಿಜಯಲಕ್ಷ್ಮಿ ನೇತ್ರಾವತಿ ರೇಣುಕಾ ಬಸಮ್ಮ ಪದ್ದಮ್ಮ ಇತರರು ಭಾಗವಹಿಸಿದ್ದರು.

### ಅಬಕಾರಿ ಇಲಾಖೆ: ಜನವರಿ 5ರಂದು ತರಬೇತಿ ಕಾರ್ಯಾಗಾರ

**ರಾಯಚೂರು,ಡಿ.26:** ಇಲ್ಲಿನ ಅಬಕಾರಿ ಇಲಾಖೆಯಲ್ಲಿ ಇದೇ ಪ್ರಥಮವಾಗಿ ಇ-ಹರಾಜು ಮೂಲಕ ಸನ್ನದುಗಳ ವಿಲೇವಾರಿಗೆ ಕ್ರಮ ಕೈಗೊಂಡಿದ್ದು, ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯ ಸಾರ್ವಜನರಿಗೆ ನಗರದ ಕೃಷಿ ವಿಶ್ವವಿದ್ಯಾಲಯದ ಸಭಾಂಗಣ-2ರಲ್ಲಿ 2026ರ ಜನವರಿ 5ರ ಬೆಳಿಗ್ಗೆ 11ಗಂಟೆಗೆ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದ್ದು, ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಅಬಕಾರಿ ಇಲಾಖೆಯ ಉಪ ಆಯುಕ್ತರಾದ ಮಹೇಂದ್ರ ಕುಮಾರ್ ಅವರು ತಿಳಿಸಿದ್ದಾರೆ.ರಾಯಚೂರು ಜಿಲ್ಲೆಗೆ ಹಂಚಿಕೆಯಾಗಿರುವ ಒಟ್ಟು 09 ಸನ್ನದುಗಳ ಇ-ಹರಾಜು ನಡೆಯಲಿದೆ. ಅಬಕಾರಿ ಆಯುಕ್ತರು ಹೊರಡಿಸಿರುವ ತರಬೇತಿ ವೇಳಾಪಟ್ಟಿಯನ್ನು ಅಬಕಾರಿ ಇಲಾಖೆಯ ವೆಬ್‌ಸೈಟ್: https:// stateexcise. karnataka.gov.in ಮತ್ತು ಎಮ್‌ಎಸ್‌ಟಿಸಿ ಲಿಮಿಟೆಡ್ ಸಂಸ್ಥೆಯವೆಬ್‌ಸೈಟ್;https:// www.mstce commerce.com ನಲ್ಲಿ ಲಭ್ಯವಿರುತ್ತದೆ.ಹೆಚ್ಚಿನ ಮಾಹಿತಿಗಾಗಿ ರಾಯಚೂರು ವಿಭಾಗದ ಉಪ ಅಧೀಕ್ಷಕರಾದ ಮೋನಪ್ಪ ಮೊಬೈಲ್ ಸಂಖ್ಯೆ: 9606604154, ರಾಯಚೂರು ವಲಯ ಅಬಕಾರಿ ನಿರೀಕ್ಷಕರಾದ ಸತ್ಯನಾರಾಯಣ ಮೊಬೈಲ್ ಸಂಖ್ಯೆ: 9008036727, ಮಾನವಿ ವಲಯ ಅಬಕಾರಿ ನಿರೀಕ್ಷಕರಾದ ಯಮನೂರ್ ಸಾಬ್ ಮೊಬೈಲ್ ಸಂಖ್ಯೆ: 9481857923, ಸಿಂಧನೂರು ವಲಯ ಅಬಕಾರಿ ನಿರೀಕ್ಷಕರಾದ ಗಂಗಾಧರ್ ಬಡಿಗೇರ್ ಮೊಬೈಲ್ ಸಂಖ್ಯೆ: 9110452279, ಲಿಂಗಸುಗೂರು ವಲಯ ಅಬಕಾರಿ ನಿರೀಕ್ಷಕರಾದ ಲಕ್ಷ್ಮಿದೇವಿ ಮೊಬೈಲ್ ಸಂಖ್ಯೆ: 8317359297ಗೆ ಸಂಪರ್ಕ ಮಾಡಬ ಹುದಾಗಿದೆ ಎಂದು ಅಬಕಾರಿ ಇಲಾಖೆಯ ಉಪ ಆಯುಕ್ತರಾದ ಮಹೇಂದ್ರ ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಾನಗರ ಪಾಲಿಕೆಯಿಂದ ಆಕ್ಷೇಪಣೆಗೆ ಅರ್ಜಿ ಆಹ್ವಾನ

**ರಾಯಚೂರು ಡಿ,26:** ಇಲ್ಲಿನ ಮಹಾನಗರ ಪಾಲಿಕೆಯ ವಾರ್ಡ್ ನಂ.35 ನಿವೇಶನ ಮುನ್ಸಿಪಾಲ್ ನಂ.1-11-49/ 35/1 & 1-11-49/37/2ರಲ್ಲಿ ಡಾ.ನರಸಿಂಹಲು ನಂದಿನಿ ಮೆಮೋರೇಬಲ್ ಟ್ರಸ್ಟ್, ಶಿಕ್ಷಣ ಸಂಸ್ಥೆ, ಕಟ್ಟಡ ನಿರ್ಮಾಣ ಮಾಡಲು ಡಾ.ಶ್ರೀನರಸಿಂಹಲು ನಂದಿನಿ ಅವರು ಅರ್ಜಿ ಸಲ್ಲಿಸಿದ್ದು, ಅಕ್ಕ-ಪಕ್ಕದ ಹಾಗೂ ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆ ಇದ್ದಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ಲಿಖಿತವಾಗಿ ಸಲ್ಲಿಸಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

ಈ ಜಮೀನು ಶೈಕ್ಷಣಿಕ ಉದ್ದೇಶಕ್ಕಾಗಿ ಏಕ ನಿವೇಶನ ಅನುಮೋದನೆಯನ್ನು ಮಾನ್ಯ ಜಿಲ್ಲಾಧಿಕಾರಿಗಳಿಂದ ಪಡೆದುಕೊಂಡಿರುತ್ತದೆ. ಮತ್ತು ನಗರಾಭಿವೃದ್ಧಿ ಪ್ರಾಧಿಕಾರದಿಂದ ಮತ್ತು ನಗರಸಭೆಯಿಂದ ಅನುಮತಿ ಪಡೆದಿರುತ್ತಾರೆ. ಈ ಕಚೇರಿಯಿಂದ ಆಸ್ತಿತೆರಿಗೆ ವಿನಾಯಿತಿ ಪಡೆದುಕೊಂಡಿದ್ದು, ಈ ಸ್ಥಳದಲ್ಲಿ ನಕ್ಷೆ ಪ್ರಕಾರ ಕಟ್ಟಡ ಪರವಾನಿಗೆ ಕೋರಿ ಅರ್ಜಿಸಲ್ಲಿಸಿರುವುದರಿಂದ ಇದಕ್ಕೆ ಅಕ್ಕ-ಪಕ್ಕದ ಹಾಗೂ ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆ ಇದ್ದಲ್ಲಿ 15 ದಿನಗಳ ಒಳಗಾಗಿ ದಾಖಲೆಯೊಂದಿಗೆ ಈ ಕಾರ್ಯಾಲಯಕ್ಕೆ ದೂರು ಸಲ್ಲಿಸತಕ್ಕದ್ದು, ಅವಧಿ ಮುಗಿದ ನಂತರ ಬಂದ ಆಕ್ಷೇಪಣೆ, ತಕರಾರರನ್ನು ಪರಿಗಣಿಸಲಾಗುವುದಿಲ್ಲವೆಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

# ಜ.10 ರಂದು ಶ್ರೀ ರಾಘವೇಂದ್ರಸ್ವಾಮಿ ಮಠ ಮಂತ್ರಾಲಯಕ್ಕೆ ಪಾದಯಾತ್ರೆ

ಯುವಮಾರ್ಗ ಸುದ್ದಿ

**ಮಾನ್ವಿ,ಡಿ.26–** ಪಟ್ಟಣದ ಶ್ರೀ ನಗರೇಶ್ವರ ಆರ್ಯವೈಶ್ಯ ಸಂಘ ಮಾನ್ವಿ ವತಿಯಿಂದ 2 ನೇ ವರ್ಷದ ಶ್ರೀ ರಾಘವೇಂದ್ರಸ್ವಾಮಿ ಮಠ ಮಂತ್ರಾಲಯಕ್ಕೆ ಪಾದಯಾತ್ರೆಯನ್ನು ಮಾನ್ವಿ ಪಟ್ಟಣದ ಶ್ರೀ ವಾಸವಿ ಕಲ್ಯಾಣ ಮಂಟಪದಿಂದ ಜ.10 ರಂದು ಬೆಳಿಗ್ಗೆ 6-30 ರಿಂದ ಶ್ರೀ ನಗರೇಶ್ವರ ದೇವಸ್ಥಾನದಲ್ಲಿ ಶ್ರೀ ನಗರೇಶ್ವರ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿ ಗೋಪೂಜೆ ಯೊಂದಿಗೆ ಕಲ್ಮಠ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಚೀಕಲಪರ್ವಿಯ ಶ್ರೀ ರುದ್ರಮುನೀಶ್ವರ ಮಠದ ಶ್ರೀ ಸದಾಶಿವ ಮಹಾಸ್ವಾಮಿಗಳು ಪಾದಯಾತ್ರೆಗೆ ಚಾಲನೆ ನೀಡಲಿದ್ದಾರೆ. ಪಾದಯಾತ್ರೆಯಲ್ಲಿ ತಾಲೂಕಿನ ಎಲ್ಲಾ ಸಮಾಜದವರು ಭಕ್ತಿ ಶ್ರೇದ್ದೆಯಿಂದ ಭಾಗವಹಿಸಬಹುದಾಗಿದ್ದು ಆಸಕ್ತರು ತಮ್ಮ ಹೆಸರುಗಳನ್ನು ಜ.5 ರೊಳಗಾಗಿ ಶ್ರೀ ನಗರೇಶ್ವರ ಆರ್ಯವೈಶ್ಯ ಸಂಘದಲ್ಲಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಾರ್ಯದರ್ಶಿ ಬಿ.ಈರಣ್ಣ ಶೆಟ್ಟಿ, ದೂ ಸಂಖ್ಯೆ 9845561501, ಶ್ರೀ ನಗರೇಶ್ವರ ಆರ್ಯವೈಶ್ಯ ಸಂಘದ ಅಧ್ಯಕ್ಷರಾದ ಆರ್.ಮುತ್ತುರಾಜ್ ಶೆಟ್ಟಿ ದೂ 9845688088 ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಮೆಥೋಡಿಸ್ಟ್ ಚರ್ಚ್‌ನಲ್ಲಿ ಕ್ರಿಸ್‌ಮಸ್ ಹಬ್ಬದ ಆಚರಣೆ

ಯುವಮಾರ್ಗ ಸುದ್ದಿ



**ಸಿರವಾರ,ಡಿ.26–** ಪಟ್ಟಣದ ಮೆಥೋಡಿಸ್ಟ್ ಚರ್ಚ್‌ನಲ್ಲಿ ಕ್ರಿಸ್‌ಮಸ್ ಹಬ್ಬದ ಅಂಗವಾಗಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಅವರು ಭಾಗವಹಿಸಿ ಕ್ರೈಸ್ತ ಬಾಂಧವರಿಗೆ ಶುಭಾಶಯ ಕೋರಿದರು. ಈ ವೇಳೆ ಮಾತನಾಡಿದ ಅವರು, ಕ್ರಿಸ್‌ಮಸ್ ಹಬ್ಬವು ಶಾಂತಿ, ಪ್ರೀತಿ ಹಾಗೂ ಮಾನವೀಯತೆಯ ಸಂದೇಶವನ್ನು ಸಾರುವ ಹಬ್ಬವಾಗಿದ್ದು, ಸಮಾಜದಲ್ಲಿ ಸೌಹಾರ್ದತೆ ಮತ್ತು ಸಹಬಾಳ್ವೆಯನ್ನು ಬಲಪಡಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಚರ್ಚ್‌ನ ಗುರುಗಳು ಹಬ್ಬದ ಮಹತ್ವವನ್ನು ವಿವರಿಸಿ ಸಂದೇಶ ನೀಡಿದರು. ಎಲ್ಲ ಧರ್ಮಗಳ ನಡುವೆ ಪರಸ್ಪರ ಗೌರವ ಮತ್ತು ಭ್ರಾತೃತ್ವ ಬೆಳೆಸಬೇಕೆಂದು ಅವರು ಕರೆ ನೀಡಿದರು.

ಈ ಸಂದರ್ಭದಲ್ಲಿ ಸಿರವಾರ ಜೆಡಿಎಸ್ ಪಕ್ಷದ ತಾಲೂಕು ಅಧ್ಯಕ್ಷರಾದ ಮಲ್ಲಿಕಾರ್ಜುನ ಪಾಟೀಲ ಬಲ್ಲಟಗಿ, ಮಾನ್ವಿ ಜೆಡಿಎಸ್ ಪಕ್ಷದ ತಾಲೂಕು ಅಧ್ಯಕ್ಷರಾದ ಈರಣ್ಣ ಮರ್ಲಟ್ಟಿ, ಹಿರಿಯ ಮುಖಂಡರಾದ ಜಿ. ಲೋಕರೆಡ್ಡಿ, ಈಶಪ್ಪ ಹೂಗಾರ್, ಕಾಶಿನಾಥ್ ಸರೋಧೆ, ಶಿವರಾಜ್ ನಾಯಕ ಚಾಗಭಾವಿ, ಪಟ್ಟಣ ಪಂಚಾಯತ್ ಸದಸ್ಯರಾದ ಗ್ಯಾನಪ್ಪ ಸಿರವಾರ, ರಂಜಿತ್ ಕುಮಾರ್ ಸಿರವಾರ, ದಾನಪ್ಪ ಸಿರವಾರ, ಸುಗೂರಯ್ಯ ಹಿರೇಮಠ, ಸತ್ತಾರ ಸಾಬ್ ಗುತ್ತೇದಾರ್, ಲಕ್ಷ್ಮಣ ಸೇರಿದಂತೆ ಜೆಡಿಎಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

# ಕ್ರಿಸ್‌ಮಸ್ ಹಬ್ಬದ ಆಚರಣೆ: ಸೇಂಟ್ ಮೇರಿಸ್ ಚರ್ಚ್‌ನಲ್ಲಿ ಸೌಹಾರ್ದತಾ ಸಂದೇಶ

ಯುವಮಾರ್ಗ ಸುದ್ದಿ




**ಮಾನ್ವಿ,ಡಿ.26–** ನಗರದ ಕೋನಾಪುರ ಪೇಟೆಯ ಸೇಂಟ್ ಮೇರಿಸ್ ಚರ್ಚ್‌ನಲ್ಲಿ ಕ್ರಿಸ್‌ಮಸ್ ಹಬ್ಬದ ಅಂಗವಾಗಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಅವರು ಭಾಗವಹಿಸಿ ಕ್ರೈಸ್ತ ಸಮುದಾಯಕ್ಕೆ ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕ್ರಿಸ್‌ಮಸ್ ಹಬ್ಬವು ಶಾಂತಿ, ಪ್ರೀತಿ ಹಾಗೂ ಮಾನವೀಯ ಮೌಲ್ಯಗಳನ್ನು ಸಾರುವ ಮಹತ್ವದ ಹಬ್ಬವಾಗಿದ್ದು, ಎಲ್ಲ ಧರ್ಮಗಳ ನಡುವೆ ಸೌಹಾರ್ದತೆ ಮತ್ತು ಸಹಬಾಳ್ವೆಯನ್ನು ಬಲಪಡಿಸುವುದಾಗಿ ಹೇಳಿದರು.

ಕಾರ್ಯಕ್ರಮದಲ್ಲಿ ಚರ್ಚ್‌ನ ಫಾದರ್ ಸುರೇಶ್ ವಿನ್ಸೆಂಟ್ ಹಾಗೂ ಫಾದರ್ ವಸಂತ್ ಅವರು ಹಬ್ಬದ ಸಂದೇಶ ನೀಡಿದರು. ಸಮಾಜದಲ್ಲಿ ಶಾಂತಿ, ಸಹನೆ ಮತ್ತು ಪರಸ್ಪರ ಗೌರವವನ್ನು ಬೆಳೆಸುವಲ್ಲಿ ಕ್ರಿಸ್‌ಮಸ್ ಹಬ್ಬದ ಸಂದೇಶ ಮಹತ್ವದ್ದಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಜೆಡಿಎಸ್ ಪಕ್ಷದ ತಾಲೂಕು ಅಧ್ಯಕ್ಷರಾದ ಈರಣ್ಣ ಮರ್ಲಟ್ಟಿ, ಹಿರಿಯ ಪುರಸಭೆ ಸದಸ್ಯರಾದ ರಾಜಾ ಮಹೇಂದ್ರ ನಾಯಕ ದೊರೆ, ತಾಲೂಕು ರೈತ ಘಟಕದ ಅಧ್ಯಕ್ಷರಾದ ಶರಣಪ್ಪ ಗೌಡ ಮದ್ಲಾಪುರ, ಪುರಸಭೆ ಸದಸ್ಯರಾದ ಬಾಷಾ ಸಾಬ್, ಶರಣಪ್ಪ ಮೇಧಾ, ತಾಲೂಕು ಮಹಾ ಪ್ರಧಾನ ಕಾರ್ಯದರ್ಶಿ ಪಿ. ರವಿಕುಮಾರ ವಕೀಲರು, ನಗರ ಘಟಕದ ಅಧ್ಯಕ್ಷರಾದ ಹೆಚ್. ಮೌನೇಶ್ ಗೌಡ, ಖಲೀಲ್ ಖುರೇಷಿ, ಮೌಲಾ ಸಾಬ್ ಸೇರಿದಂತೆ ಸ್ಥಳೀಯ ಮುಖಂಡರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

# ಬೈಬಲ್ ಮಿಷನ್ ಚರ್ಚ್ ಪೆನೀಯೇಲ್ ಮಹಿಮೆ ಮಂದಿರದಲ್ಲಿ ಕ್ರಿಸ್‌ಮಸ್ ಹಬ್ಬ ಆಚರಣೆ



**ಮಾನ್ವಿ,ಡಿ.26–**ಪಟ್ಟಣದ ಬೈಬಲ್ ಮಿಷನ್ ಚರ್ಚ್ ಪೆನೀಯೇಲ್ ಮಹಿಮೆ ಮಂದಿರದಲ್ಲಿ ಕ್ರಿಸ್‌ಮಸ್ ಹಬ್ಬದ ಅಂಗವಾಗಿ ರೆ.ಜಿ. ವಿಜಯಪಾಲ್ ವಿಶೇಷ ಪ್ರಾರ್ಥನೆ ಸಲ್ಲಿಸಿದರು, ನಂತರ ನಿತ್ಯ ಜೀವನಕ್ಕಾಗಿ ರಕ್ಷಣೆಯ ಕ್ರಿಸ್ ಮಸ್ ಶುಭವಾರ್ತೆಯನ್ನು ತಿಳಿಸಿದರು, ಮಕ್ಕಳು ಕ್ರಿಸ್ ಮಸ್ ಕೇಕ್ ಕತ್ತರಿಸಿ ಸಂಭ್ರಮಿಸಿದರು ನಂತರ ನೂರಾರು ಕ್ರೈಸ್ತ ಧರ್ಮಿಯರಿಂದ ಸಾಮೂಹಿಕ ಪ್ರಾರ್ಥನೆ ನಡೆಯಿತು, ಪಟ್ಟಣದ ಸಂಗಪೂರ್ ರಸ್ತೆಯ ಬೈಬಲ್ ಮಿಷನ್ ಚರ್ಚ್ನಿಂದ ವಾಲ್ಮೀಕಿ ವೃತ್ತ, ಬಸವವೃತ್ತ ಮೂಲಕ ತಹಸೀಲ್ದಾರ್ ಕಚೇರಿಯವರೆಗೆ ಕ್ರಿಸ್ ಮಸ್ ರ್‍ಯಾಲಿ ನಡೆಯಿತು.

# ಅರಣ್ಯ ಇಲಾಖೆ ಸಿಬ್ಬಂದಿಗೆ 1 ಕೋಟಿ ಅಪಘಾತ ವಿಮೆ: ಈಶ್ವರ ಖಂಡ್ರೆ



**ಬೆಂಗಳೂರು, ಡಿ.26–** ಅರಣ್ಯ ಇಲಾಖೆಯ ಖಾಯಂ ಅಧಿಕಾರಿ, ಸಿಬ್ಬಂದಿಗೆ 1 ಕೋಟಿ ರೂ. ಅಪಘಾತ (ಮರಣ)ವಿಮೆ ಹಾಗೂ ಹೊರಗುತ್ತಿಗೆ ಸಿಬ್ಬಂದಿಗೆ 20 ಲಕ್ಷ ವಿಮಾ ಸೌಲಭ್ಯ ಕಲ್ಪಿಸಲು ಬ್ಯಾಂಕ್ ಆಫ್ ಬರೋಡಾದೊಂದಿಗೆ ತಿಳಿವಳಿಕೆ ಒಪ್ಪಂದ ಮಾಡಿಕೊಳ್ಳಲಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಮಾಧ್ಯಮ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ವನ ಮತ್ತು ವನ್ಯಜೀವಿಗಳ ರಕ್ಷಣೆಗಾಗಿ ಮುಂಚೂಣಿ ಸಿಬ್ಬಂದಿಗಳು/ ಹಸಿರು ಸೈನಿಕರು ಅಪಾಯ ಎದಿಸುತ್ತಾ ಹಗಲಿರುಳು ಶ್ರಮಿಸುತ್ತಿದ್ದು, ಇಲಾಖೆ ಕೆಲವು ಶೌರ್ಯಶಾಲಿ ಹಸಿರು ಯೋಧರನ್ನು ಕಳೆದುಕೊಂಡಿದೆ. ಇವರೆಲ್ಲರಿಗೂ ಸಾಮಾಜಿಕ ಮತ್ತು ಆರ್ಥಿಕ ಭದ್ರತೆ ಒದಗಿಸಲು ಈ ತಿಳಿವಳಿಕೆ ಒಬ್ಬಂದ ಮಾಡಿಕೊಳ್ಳಲಾಗಿದೆ ಎಂದು ವಿವರಿಸಿದ್ದಾರೆ.

ವನ ಮತ್ತು ವನ್ಯಜೀವಿ ಸಂರಕ್ಷಣೆಯಲ್ಲಿ ಮುಂಚೂಣಿ ಹೊರಗುತ್ತಿಗೆ ಸಿಬ್ಬಂಯ ಪಾತ್ರವೂ ಮಹತ್ವದ್ದಾಗಿದೆ. ಹೀಗಾಗಿ ಹೊರಗುತ್ತಿಗೆ ಸಿಬ್ಬಂದಿಗೂ 20 ಲಕ್ಷಗಳ ರೂ. ವಿಮೆ ಸೌಲಭ್ಯ ಕಲ್ಪಿಸಲಾಗಿದೆ. ಅರಣ್ಯ ಇಲಾಖೆಯ ಎಲ್ಲಾ ಖಾಯಂ ಉದ್ಯೋಗಿಗಳಿಗೆ, ಅವರ ವೇತನ ಮತ್ತು ಶ್ರೇಣಿಯ ಹೊರತಾಗಿ ಎಲ್ಲರಿಗೂ 1 ಕೋಟಿ ರೂ.ಗಳ ಅಪಘಾತ ಮರಣ ವಿಮೆಯನ್ನು ಬ್ಯಾಂಕ್ ನೀಡುತ್ತದೆ, ಒಂದೊಮ್ಮೆ ಕರ್ತವ್ಯದಲ್ಲಿದ್ದಾಗ ಮೃತಪಟ್ಟರೆ ಹೆಚ್ಚುವರಿಯಾಗಿ 25ಲಕ್ಷ ರೂ.ಗಳನ್ನು ಬ್ಯಾಂಕ್ ಪಾವತಿಸಲಿದೆ ಎಂದು ತಿಳಿಸಿದ್ದಾರೆ.

ಬ್ಯಾಂಕ್ ಆಫ್ ಬರೋಡಾದಲ್ಲಿ ಇಲಾಖೆಯ ನೌಕರರು ಪಿಂಚಣಿ ಖಾತೆಯನ್ನು ಮುಂದುವರಿಸಿದರೆ, ಈ ವೈಯಕ್ತಿಕ ಅಪಘಾತ ವಿಮಾ ರಕ್ಷಣೆಯ ಸೌಲಭ್ಯ 70 ವರ್ಷ ವಯಸ್ಸಿನವರೆಗೆ ಮುಂದುವರಿಯುತ್ತದೆ. ಇದಲ್ಲದೆ, ಖಾಯಂ ಉದ್ಯೋಗಿಗಳಿಗೆ ರೂ.10.00 ಲಕ್ಷಗಳ ಜೀವ ವಿಮಾ ರಕ್ಷಣೆಯನ್ನು ಸಹ ಬ್ಯಾಂಕ್ ಒದಗಿಸುತ್ತದೆ ಎಂದು ತಿಳಿಸಿದ್ದಾರೆ.

ಕರ್ನಾಟಕ ಅರಣ್ಯ ಇಲಾಖೆಯ ನೌಕರರು ಮತ್ತು ಅವರ ಕುಟುಂಬಗಳ ಹಿತದೃಷ್ಟಿಯಿಂದ ಕರ್ನಾಟಕ ಅರಣ್ಯ ಇಲಾಖೆಯು ಬ್ಯಾಂಕ್ ಆಫ್ ಬರೋಡಾದೊಂದಿಗೆ ತಿಳಿವಳಿಕೆ ಒಪ್ಪಂದ ಮಾಡಿಕೊಂಡಿದ್ದು, ಹಲವು ವಿಶೇಷ ಸವಲತ್ತುಗಳೂ ಲಭಿಸಲಿವೆ. ಈ ಬಗ್ಗೆ ಎಲ್ಲರಿಗೂ ಅರಿವು ಮೂಡಿಸುವಂತೆ ಮತ್ತು ಬಿಓಬಿಯಲ್ಲಿ ಸಂಬಳ ಖಾತೆ ತೆರೆಯಲು ಸೂಚಿಸಲಾಗಿದೆ ಎಂದು ಈಶ್ವರ ಖಂಡ್ರೆ ತಿಳಿಸಿದ್ದಾರೆ.

## ಗ್ರಾಮೀಣ ಪ್ರದೇಶದಲ್ಲಿ ಡಿಸೆಂಬರ್ 29ರಂದು ವಿದ್ಯುತ್ ವ್ಯತ್ಯಯ

**ರಾಯಚೂರು ಡಿ,26:** ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 110/11 ಕೆವಿ ಮಲಿಯಾಬಾದ ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಡಿಸೆಂಬರ್ 29ರ ಬೆಳಗ್ಗೆ 10 ಗಂಟೆಯಿಂದ ಸಾಯಂಕಾಲ 05 ಗಂಟೆವರೆಗೆ ಗ್ರಾಮೀಣ ಮಲಿಯಾಬಾದ ವಿದ್ಯುತ್ ಉಪ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಸೆಂಬರ್ 31ರಂದು ಡಾಕ್ ಅದಾಲತ್

**ರಾಯಚೂರು ಡಿ,26:** ರಾಯಚೂರು ವಿಭಾಗೀಯ ಡಾಕ್ ಅದಾಲತ್‌ನ್ನು ರಾಯಚೂರು ವಿಭಾಗದ ಅಂಚೆ ಕಚೇರಿಗಳ ಅಧೀಕ್ಷಕರ ಅಧ್ಯಕ್ಷತೆಯಲ್ಲಿ ಡಿಸೆಂಬರ್ 31ರ ಬೆಳಗ್ಗೆ 11 ಗಂಟೆಗೆ ನಗರದ ಕನಕದಾಸ ವೃತ್ತದ ಬಳಿಯಲ್ಲಿರುವ ಅಂಚೆ ಕಚೇರಿಗಳ ಅಧೀಕ್ಷಕರ ಕಚೇರಿಯಲ್ಲಿ ನಡೆಯಲಿದೆ. ಸಾರ್ವಜನಿಕರು ಅಂಚೆ ಸೇವೆಗಳ ಬಗ್ಗೆ ತಮ್ಮ ದೂರುಗಳನ್ನು ಡಿಸೆಂಬರ್ 30ರೊಳಗೆ, ಅಂಚೆ ಕಚೇರಿಗಳ ಅಧೀಕ್ಷಕರ ಕಾರ್ಯಾಲಯ, ರಾಯಚೂರು ವಿಭಾಗ 584102ಗೆ ಸಲ್ಲಿಸಬೇಕು ಎಂದು ಅಂಚೆ ಕಚೇರಿಯ ಅಧೀಕ್ಷಕರ ಕಚೇರಿಯ ಪ್ರಕಟಣೆ ತಿಳಿಸಿದೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H